# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ
Kannada Daily

ಸಂಪುಟ – 01 ಸಂಚಿಕೆ – 37 ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 ಚಿತ್ರದುರ್ಗ ದಿನಾಂಕ : 12–08–2023 ಶನಿವಾರ ಪುಟ: 4 ಬೆಲೆ : ರೂ.2–00
Volume - 01 Issue - 37 Title- Code: KARKAN 28269 Chitradurga Date : 12-08-2023 Saturday Page: 4 Price: Rs. 2-00



ಒಳ ಪುಟದ ಸುದ್ದಿಗಳು
2 ಶಾಸಕರಿಗೆ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ವತಿಯಿಂದ ಸನ್ಮಾನ
3 ಚಿತ್ರದುರ್ಗ ಜಿಲ್ಲೆಯ ಏಳಿಗೆಗೆ ಶ್ರಮಿಸಿ ಅಧಿಕಾರಿಗಳಿಗೆ ಸೂಚನೆ : ಬಿ.ಎಸ್.ಪಾಟೀಲ್
4 ಎಸ್ಆರ್ಎಸ್ ವಿದ್ಯಾರ್ಥಿಳಿಂದ ತರಕಾರಿ ಖರೀದಿಸಿದ ಸಾರ್ವಜನಿಕರು



ಸುದ್ದಿ ಹಾಗೂ ಜಾಹೀರಾತಿಗಾಗಿ ಸಂಪರ್ಕಿಸಿ :
nammajananews@gmail.com
ವಾಟ್ಸ್ಅಪ್ ನಂ. 9686622252


## ಫಾಸ್ಟ್ ನ್ಯೂಸ್

### ವಿಶೇಷ ಸಮೀಕ್ಷಾ ಕಾರ್ಯ

**ಚಿತ್ರದುರ್ಗ :** ಸಮಗ್ರ ಶಿಕ್ಷಣ ಕರ್ನಾಟಕ ಹಾಗೂ ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಜುಲೈ 28 ರಂದು ಜರುಗಿದ 2023–24ನೇ ಸಾಲಿನ ವಿಶೇಷ ಸಮೀಕ್ಷಾ ಕಾರ್ಯದಲ್ಲಿ, ಜಿಲ್ಲೆಯಲ್ಲಿ ಶಾಲೆಯಿಂದ ಹೊರಗುಳಿದ 271 ಮಕ್ಕಳು ಪತ್ತೆ ಆಗಿದ್ದಾರೆ. 1799 ಜನ ವಸತಿ ಪ್ರದೇಶಗಳಲ್ಲಿ ಸಮೀಕ್ಷಾ ಕಾರ್ಯ ನಡೆಸಲಾಗಿದೆ. ನಗರ ಸಭೆ, ಪುರಸಭೆ, ಪಟ್ಟಣ, ಹಳ್ಳಿ, ಕಂದಾಯ ಗ್ರಾಮ, ತಾಂಡ, ಕೈಗಾರಿಕಾ ಸ್ಥಳ, ಕೃಷಿ ಕಾರ್ಮಿಕ ವಲಯಗಳು, ಕೊಳಗೇರಿ, ಹೋಟೆಲ್, ಸಂತೇ ಮೈದಾನ, ಗ್ಯಾರೇಜ್, ಬಸ್ಸು ಹಾಗೂ ರೈಲ್ವೆ ನಿಲ್ದಾಣ, ಕೋಳಿಫಾರಂ, ಆಸ್ಪತ್ರೆ, ಛತ್ರಗಳು, ಇಟ್ಟಿಗೆ ಹಾಗೂ ಮಂಡಕ್ಕಿ ಬಟ್ಟಿ, ಗಣಿಪ್ರದೇಶ ಕ್ವಾರಿಗಳಲ್ಲಿ ಸಮೀಕ್ಷೆ ನಡೆಸಿ ಮಾಹಿತಿ ಸಂಗ್ರಹಿಸಲಾಗಿದೆ. ಪತ್ತೆಯಾದ 271 ಮಕ್ಕಳಲ್ಲಿ ಶಾಲೆಗೆ ದಾಖಲಾಗಿ ಬಿಟ್ಟವರು 231, ಶಾಲೆಗೆ ದಾಖಲಾಗದ 40 ಮಕ್ಕಳಿದ್ದಾರೆ. ಚಿತ್ರದುರ್ಗ ತಾಲೂಕಿನಲ್ಲಿ ಅತಿ ಹೆಚ್ಚು 70, ಮೊಳಕಾಲ್ಮೂರು ತಾಲೂಕಿನಲ್ಲಿ 28 ವಿದ್ಯಾರ್ಥಿಗಳು ಶಾಲೆಯಿಂದ ಹೊರಗುಳಿದಿದ್ದಾರೆ. ಇವರ ಪೈಕಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಮುಸ್ಲಿಂ ಸಮುದಾಯಕ್ಕೆ ಸೇರಿದ ಮಕ್ಕಳು ಹೆಚ್ಚಿದ್ದಾರೆ. 11 ರಿಂದ 14 ವಯೋಮಾನದ 145, 15 ರಿಂದ 16 ವಯೋಮಾನದ 70 ಮಕ್ಕಳು ಹೊರಗುಳಿದ್ದಾರೆ. ಇವರಲ್ಲಿ ಗಂಡು ಮಕ್ಕಳೇ ಹೆಚ್ಚಿದ್ದಾರೆ. ಈ ಮಕ್ಕಳನ್ನು ಮುಖ್ಯವಾಹಿನಿಗೆ ತರಲು ದಾಖಲಾತಿ ಆಂದೋಲನ, ವಿಶೇಷ ದಾಖಲಾತಿ ಆಂದೋಲನ, ಬಾಲ್ಯ ವಿವಾಹ, ಬಾಲ ಕಾರ್ಮಿಕ ಪದ್ದತಿ, ಲಿಂಗ ತಾರತಮ್ಯ ಮುಂತಾದ ಸಾಮಾಜಿಕ ಪಿಡುಗಳ ಕುರಿತು ಪೋಷಕರು ಹಾಗೂ ಮಕ್ಕಳಿಗೆ ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ಆಯೋಜಿಸಲಾಗವುದು ಎಂದು ಉಪನಿರ್ದೇಶಕ ರವಿಶಂಕರ್ ರೆಡ್ಡಿ ತಿಳಿಸಿದ್ದಾರೆ.

# ಹಾಸ್ಟೆಲ್‌ಗೆ ಬಿ.ಎಸ್.ಪಾಟೀಲ್ ಭೇಟಿ



ಚಿತ್ರದುರ್ಗ ನಗರದ ಸರ್ಕಾರಿ ಕಲಾ ಕಾಲೇಜು ಹಿಂಭಾಗದ ಡಿ.ದೇವರಾಜು ಅರಸು ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಶುಕ್ರವಾರ ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಲೋಕಾಯುಕ್ತ ಜಿಲ್ಲಾ ಪೊಲೀಸ್ ಅಧೀಕ್ಷಕ ವಾಸುದೇವರಾಮ್ ಇದ್ದರು.

**ಚಿತ್ರದುರ್ಗ :** ಚಿತ್ರದುರ್ಗ ನಗರದ ಸರ್ಕಾರಿ ಕಲಾ ಕಾಲೇಜು ಬಳಿಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಡಿ.ದೇವರಾಜು ಅರಸು ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಶುಕ್ರವಾರ ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಡಿ.ದೇವರಾಜು ಅರಸು ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯದ ಅಡುಗೆ ಕೋಣೆ, ಡೈನಿಂಗ್ ಹಾಲ್, ಸ್ಟೋರ್ ರೂಂನಲ್ಲಿ ಶೇಖರಿಸಿಟ್ಟ ಅಕ್ಕಿ, ಬೆಳೆ, ತರಕಾರಿ ಸೇರಿದಂತೆ ಇನ್ನಿತರೇ ಆಹಾರ ಪದಾರ್ಥಗಳ ವೀಕ್ಷಣೆ, ರೊಟ್ಟಿ ತಯಾರಿಸುವ ಯಂತ್ರ, ಮೆನು ಚಾರ್ಟ್ ವೀಕ್ಷಿಸಿದ ಅವರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳಿಂದ ಹಾಸ್ಟೆಲ್ ವ್ಯವಸ್ಥೆಯ ಮಾಹಿತಿ ಪಡೆದರು. ಅಲ್ಲದೆ ಹಾಸ್ಟೆಲ್‌ನಲ್ಲಿನ ವ್ಯವಸ್ಥೆ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ರಾಷ್ಟ್ರ ನಿರ್ಮಾಣ ಪ್ರಕ್ರಿಯೆಯಲ್ಲಿ ತೊಡಗಿಸಿಕೊಳ್ಳುವಂತೆ ವಿದ್ಯಾರ್ಥಿಗಳನ್ನು ಪ್ರೇರೇಪಿಸಬೇಕು. ವಿದ್ಯಾರ್ಥಿಗಳನ್ನು ಉತ್ತಮ ನಾಗರಿಕರನ್ನಾಗಿ ರೂಪಿಸುವ ನಿಟ್ಟಿನಲ್ಲಿ ಸಂವಿಧಾನ, ಮೂಲಭೂತ ಹಕ್ಕು ಮತ್ತು ಕರ್ತವ್ಯಗಳು, ಸ್ವಚ್ಛತೆ, ಪರಿಸರ ಸಂರಕ್ಷಣೆ ಸೇರಿದಂತೆ ಮುಂತಾದ ವಿಷಯಗಳ ಕುರಿತು ಆಶುಭಾಷಣ ಸ್ಪರ್ಧೆಗಳನ್ನು ಆಯೋಜಿಸುವ ಮೂಲಕ ಉತ್ತಮ ಆಲೋಚನೆ, ಚಿಂತನೆಗಳನ್ನು ಬೆಳೆಸಬೇಕು. ರಾಷ್ಟ್ರದ ಸಂಪತ್ತು, ದೇಶದ ಸ್ವಾತಂತ್ರ್ಯದ ಇತಿಹಾಸ, ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ, ಬಲಿದಾನದ ಕುರಿತು ತಿಳುವಳಿಕೆ ಮೂಡಿಸುವ ಮೂಲಕ ದೇಶದ ಬಗ್ಗೆ ಗೌರವ, ಭಕ್ತಿ ಬೆಳೆಸಲು ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಬೇಕು ಎಂದು ತಿಳಿಸಿದ ಅವರು, ಈ ಕುರಿತು ಕ್ರಿಯಾಯೋಜನೆ ರೂಪಿಸಿ ಕಾರ್ಯಕ್ರಮದ ವರದಿ ನೀಡಬೇಕು ಎಂದು ಸೂಚನೆ ನೀಡಿದರು.

ಪ್ರಾಧ್ಯಾಪಕರು, ಸಂಪನ್ಮೂಲ ವ್ಯಕ್ತಿಗಳಿಂದ ವಿಶೇಷ ಉಪನ್ಯಾಸ ನೀಡುವ ಮೂಲಕ ವಿದ್ಯಾರ್ಥಿ ದೆಸೆಯಿಂದಲೇ ವಿದ್ಯಾರ್ಥಿಗಳಲ್ಲಿ ದೇಶಭಕ್ತಿ ಬೆಳೆಸಲು ಅಗತ್ಯ ಕ್ರಮವಹಿಸಬೇಕು ಎಂದು ಹೇಳಿದರು.

ಹಾಸ್ಟೆಲ್ ವಿದ್ಯಾರ್ಥಿಗಳಿಗೆ ವ್ಯಕ್ತಿತ್ವ ವಿಕಸನ, ಆತ್ಮರಕ್ಷಣಾ ಕಲೆ, ಕೌಶಲ್ಯಾಭಿವೃದ್ಧಿ ಚಟುವಟಿಕೆಗಳನ್ನು ಪ್ರಾರಂಭಿಸಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಹೇಳಿದರು. ಯೋಗ ಶಿಕ್ಷಕರನ್ನು ನಿಯೋಜಿಸಿ ಪ್ರತಿದಿನ ಬೆಳಿಗ್ಗೆ 5.30 ರಿಂದ 6.30 ರವರೆಗೆ 1 ಗಂಟೆ ಕಾಲ ಯೋಗ ಸೇರಿದಂತೆ ಕೌಶಲ್ಯಾಭಿವೃದ್ಧಿ ಚಟುವಟಿಕೆಗಳನ್ನು ಶಿಸ್ತುಬದ್ಧವಾಗಿ ಮುಂದುವರೆಸುವಂತೆ ಲೋಕಾಯುಕ್ತರು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಲೋಕಾಯುಕ್ತ ಜಿಲ್ಲಾ ಪೊಲೀಸ್ ಅಧೀಕ್ಷಕ ವಾಸುದೇವರಾಮ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಸುಬ್ರನಾಯಕ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಡಿ.ದೇವರಾಜು ಅರಸು ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ ಮೇಲ್ವಿಚಾರಕಿ ಜಾಹೀದ್ ಸೇರಿದಂತೆ ಹಾಸ್ಟೆಲ್ ಸಿಬ್ಬಂದಿ ಇದ್ದರು.

# ಪುಣ್ಯ ಕೋಟಿ ಗೋ ಶಾಲೆಗೆ ಚಳ್ಳಕೆರೆ ಶಾಸಕ ಭೇಟಿ



**ಚಳ್ಳಕೆರೆ :** ಚಳ್ಳಕೆರೆ ತಾಲ್ಲೂಕಿನ ಬಾಲೇನಹಳ್ಳಿ ಗೇಟ್‌ನಲ್ಲಿ ಇರುವ ಪುಣ್ಯ ಕೋಟಿ ಗೋ ಶಾಲೆಗೆ ಸ್ಥಳೀಯ ಶಾಸಕ ಟಿ.ರಘುಮೂರ್ತಿ ಭೇಟಿ ನೀಡಿ ಗೋವುಗಳನ್ನು ವೀಕ್ಷಿಸಿ ಪರಿಶೀಲನೆ ನಡೆಸಿದರು.

ಇನ್ನೂ ಮಾಧ್ಯಮದೊಂದಿಗೆ ಮಾತನಾಡಿದ ಅವರು ಸರಕಾರಿ ಪುಣ್ಯ ಕೋಟಿ ಗೋಶಾಲೆಯಲ್ಲಿ ಸಾರ್ವಜನಿಕರು ಗೋವುಗಳನ್ನು ಸಾಕದೆ ಇದ್ದ ಸಂಧರ್ಭದಲ್ಲಿ ತಂದು ಇಲ್ಲಿ ಬಿಡಬಹುದು ಗೋಮಾತೆಯನ್ನು ಉಳಿಸುವ ನಿಟ್ಟಿನಲ್ಲಿ ಸರಕಾರ ಸನ್ನದು ಹಾಗಿದೆ ಆದ್ದರಿಂದ ಬಯಲು ಸೀಮೆಯಲ್ಲಿ ಪುಣ್ಯಕೋಟಿ ಗೋಶಾಲೆ ತೆರೆದು ಗೋವುಗಳ ರಕ್ಷಣೆಗೆ ಮುಂದಾಗಳಾಗಿದೆ ಎಂದರು.

ಈದೇ ಸಂದರ್ಭದಲ್ಲಿ ಉಸ್ತುವಾರಿ ಪಶು ವೈದ್ಯಾಧಿಕಾರಿಗಳಾದ ಶ್ರೀನಿವಾಸ್, ಮಾಜಿ ತಾಲ್ಲೂಕು ಪಂಚಾಯತ್ ಸದಸ್ಯರಾದ ಹೆಚ್.ಆಂಜನೇಯ, ಮುಖಂಡರು ಹಾಗೂ ಕಾರ್ಯಕರ್ತರ ಮತ್ತು ಗೋಶಾಲೆ ಮೇಲ್ವಿಚಾರಕರು ಉಪಸ್ಥಿತರಿದ್ದರು.

# ಔಷಧಿ ವಿತರಣೆ ಸಮರ್ಪಕವಾಗಿ ದಾಖಲಾಗಬೇಕು : ಬಿ.ಎಸ್. ಪಾಟೀಲ್



**ಚಿತ್ರದುರ್ಗ :** ಚಿತ್ರದುರ್ಗ ಜಿಲ್ಲಾಸ್ಪತ್ರೆಯ ತುರ್ತು ಚಿಕಿತ್ಸಾ ಘಟಕದಲ್ಲಿ ಹೊರರೋಗಿ ಮತ್ತು ಒಳರೋಗಿಗಳಿಗೆ ಚಿಕಿತ್ಸೆ ನೀಡಲಾಗುತ್ತಿದ್ದು, ಇಲ್ಲಿ ರೋಗಿಗಳಿಗೆ ನೀಡುವ ಔಷಧಿ ವಿತರಣೆ ವಹಿಯ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಣೆ ಮಾಡಬೇಕು ಎಂದು ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ್ ಸೂಚನೆ ನೀಡಿದರು.

ಚಿತ್ರದುರ್ಗ ಜಿಲ್ಲಾಸ್ಪತ್ರೆಗೆ ಶುಕ್ರವಾರ ಭೇಟಿ ನೀಡಿ, ಪರಿಶೀಲನೆ ನಡೆಸಿದ ಅವರು, ತುರ್ತು ಚಿಕಿತ್ಸಾ ಘಟಕದ ಔಷಧಿ ವಿತರಣೆ ವಹಿಯಲ್ಲಿ ಕೇವಲ ಔಷಧಿ ಪೂರೈಕೆ ಆಗಿರುವ ಮಾಹಿತಿಯನ್ನು ಮಾತ್ರ ದಾಖಲು ಮಾಡಲಾಗುತ್ತಿದೆ. ಇದರ ಜೊತೆಗೆ ರೋಗಿಗಳಿಗೆ ವಿತರಿಸುವ ಔಷಧಿ ಹೆಸರು, ಪ್ರಮಾಣ, ವಿವರವನ್ನೂ ಕೂಡ ರಿಜಿಸ್ಟರ್‌ನಲ್ಲಿ ದಾಖಲು ಮಾಡಬೇಕು ಎಂದು ತಾಕೀತು ಮಾಡಿದರು.

ಭಾನುವಾರ ವೈದ್ಯರು ಸಿಗಲ್ಲ, ತುರ್ತು ಸಂದರ್ಭಗಳಲ್ಲಿ ಫೋನ್ ಮಾಡಿದರೂ ಸರಿಯಾಗಿ ಸ್ಪಂದಿಸುವುದಿಲ್ಲ. ಬಡವರು ಹೆಚ್ಚಿನ ಸಂಖ್ಯೆಯಲ್ಲಿ ಸರ್ಕಾರಿ ಆಸ್ಪತ್ರೆಗಳನ್ನು ಅವಲಂಬಿಸಿದ್ದಾರೆ. ಹಾಗಾಗಿ ಪಾಳಿ ಪದ್ಧತಿಯಲ್ಲಿ ಕರ್ತವ್ಯ ನಿರ್ವಹಿಸಲು ವೈದ್ಯರ ವ್ಯವಸ್ಥೆ ಮಾಡಬೇಕು ಎಂದು ಸಾರ್ವಜನಿಕರು ಲೋಕಾಯುಕ್ತರ ಗಮನಸೆಳೆದರು. “ಬಡವರಿಗೆ ಸಮರ್ಪಕವಾಗಿ ಆರೋಗ್ಯ ಸೇವೆ ಒದಗಿಸಬೇಕು. ತಕ್ಷಣ ಸ್ಪಂದಿಸುವ ಕೆಲಸವಾಗಬೇಕು. ಈ ಕುರಿತು ದೂರುಗಳು ಬಂದರೆ ಸೂಕ್ತ ಕ್ರಮವಹಿಸಬೇಕು ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ದೇವರಾಜ್ ಅವರಿಗೆ ಸೂಚನೆ ನೀಡಿದರು.

ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ್ ಅವರು, ಜಿಲ್ಲಾಸ್ಪತ್ರೆಯ ತುರ್ತು ಚಿಕಿತ್ಸಾ ವಿಭಾಗ, ಹೊಸದಾಗಿ ನಿರ್ಮಿಸಲಾಗಿರುವ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಲೋಕಾಯುಕ್ತ ಜಿಲ್ಲಾ ಪೊಲೀಸ್ ಅಧೀಕ್ಷಕ ವಾಸುದೇವರಾಮ್, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಆರ್.ರಂಗನಾಥ್, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ದೇವರಾಜ್ ಸೇರಿದಂತೆ ಜಿಲ್ಲಾಸ್ಪತ್ರೆ ಸಿಬ್ಬಂದಿ ಇದ್ದರು.




**ಇಂದಿನ ಚಿನ್ನ ಮತ್ತು ಬೆಳ್ಳಿ ದರಗಳು : 91.6 Kdm- 5540/gm | 85 kdam - 5140/gm | ಬೆಳ್ಳಿ : 67000 / ಕೆಜಿ**

## ಫಾಸ್ಟ್ ನ್ಯೂಸ್

### ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮಗಳು

**ಚಿತ್ರದುರ್ಗ** : ಜಿಲ್ಲಾಡಳಿತ, ಸಾರ್ವಜನಿಕ ಶಿಕ್ಷಣ ಇಲಾಖೆ, ನಗರಸಭೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಇದೇ ಆಗಸ್ಟ್ 15ರಂದು ಬೆಳಿಗ್ಗೆ 9ಕ್ಕೆ ಚಿತ್ರದುರ್ಗ ನಗರದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ಭಾರತದ ಸ್ವಾತಂತ್ರ್ಯ ದಿನಾಚರಣೆಯನ್ನು ಆಯೋಜಿಸಲಾಗಿದೆ.

ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವ ಎ.ನಾರಾಯಣಸ್ವಾಮಿ ಘನ ಉಪಸ್ಥಿತಿವಹಿಸುವರು. ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅವರು ರಾಷ್ಟ್ರ ಧ್ವಜಾರೋಹಣ ಮತ್ತು ಸ್ವಾತಂತ್ರ್ಯೋತ್ಸವ ಸಂದೇಶ ನೀಡುವರು.

ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಎಂ.ಚಂದ್ರಪ್ಪ, ಎನ್. ವೈ.ಗೋಪಾಲಕೃಷ್ಣ, ವಿಧಾನ ಪರಿಷತ್ ಸದಸ್ಯರಾದ ಡಾ.ವೈ.ಎ.ನಾರಾಯಣಸ್ವಾಮಿ, ಚಿದಾನಂದ ಎಂ.ಗೌಡ, ಕೆ.ಎಸ್. ನವೀನ್, ಜಿಲ್ಲಾ ಸ್ವಾತಂತ್ರ್ಯ ಹೋರಾಟಗಾರರ ಸಂಘದ ಅಧ್ಯಕ್ಷ ಎ. ಗೋವಿಂದಪ್ಪ ಭಾಗಹಿಸುವವರು.

ಅಂದು ಸಂಜೆ 6 ಗಂಟೆಗೆ ನಗರದ ತರಾಸು ರಂಗಮಂದಿರದಲ್ಲಿ ಶಾಲಾ ಕಾಲೇಜು ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

### ವಿದ್ಯುತ್ ವ್ಯತ್ಯಯ

**ಚಿತ್ರದುರ್ಗ** : ಬೆಸ್ಕಾಂ ಚಿತ್ರದುರ್ಗ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಯಲ್ಲಿ ಬರುವ ಪಂಡರಹಳ್ಳಿ ಶಾಖಾ ವ್ಯಾಪ್ತಿಯ ಜಾನುಕೊಂಡ ಗ್ರಾಮದ ಹತ್ತಿರ ಎಲ್.ಟಿ ಮಾರ್ಗದ ವಾಹಕ ಬದಲಾಯಿಸುವ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಇದೇ ಆಗಸ್ಟ್ 12 ಮತ್ತು 13 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.

ವಿದ್ಯುತ್ ಅಡಚಣೆಯಾಗುವ ಪ್ರದೇಶಗಳು: 66/11 ಕೆವಿ ಪಂಡರಹಳ್ಳಿ ವಿದ್ಯುತ್ ವಿತರಣಾ ಕೇಂದ್ರದಿಂದ ಸರಬರಾಜಾಗುವ ಎಫ್-8 ಸೋಲ್ಲಾಪುರ ಎನ್.ಜೆ.ವೈ 11ಕೆವಿ ಮಾರ್ಗದಲ್ಲಿ ವಿದ್ಯುತ್ ಅಡಚಣೆಯಾಗಲಿದೆ.

ಪಂಡರಹಳ್ಳಿ ವ್ಯಾಪ್ತಿಯ ಜಾನುಕೊಂಡ, ಸಿದ್ದಾಪುರ, ಮಾಳಪ್ಪನಹಟ್ಟಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಗ್ರಾಹಕರು ಸಹಕರಿಸಬೇಕು ಎಂದು ಬೆಸ್ಕಾಂ ಚಿತ್ರದುರ್ಗ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

### ಕ್ರೀಡಾಪಟುಗಳು ವಿವರ ಸಲ್ಲಿಸಲು ಸೂಚನೆ

**ಚಿತ್ರದುರ್ಗ** : ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ನಿರ್ದೇಶನದಂತೆ 2021 ಮತ್ತು 2022ನೇ ಸಾಲಿನಲ್ಲಿ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪದಕ ವಿಜೇತರಾದ ಕ್ರೀಡಾಪಟುಗಳು ಇದೇ ಆಗಸ್ಟ್ 14ರೊಳಗೆ ಪೂರ್ಣ ವಿವರಗಳನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಚೇರಿಗೆ ಸಲ್ಲಿಸಬೇಕು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

### ರಾಜ್ಯ ಮಟ್ಟದ ಸಮ್ಮೇಳನಕ್ಕೆ ದಾವಣಗೆರೆ ವಕೀಲರು



**ದಾವಣಗೆರೆ** : ಇದೇ 12 ಮತ್ತು 13 ರಂದು ಮೈಸೂರಿನಲ್ಲಿ ನಡೆಯುವ ರಾಜ್ಯ ಮಟ್ಟದ ವಕೀಲರ ಸಮ್ಮೇಳನದಲ್ಲಿ ಭಾಗವಹಿಸಲು ದಾವಣಗೆರೆ ಜಿಲ್ಲಾ ವಕೀಲರ ಸಂಘದಿಂದ ಸುಮಾರು 350 ಜನ ವಕೀಲರು ಸೇರಿದಂತೆ ಜಿಲ್ಲೆಯ 600ಕ್ಕೂ ಹೆಚ್ಚು ವಕೀಲರು ಶುಕ್ರವಾರ ಮೈಸೂರಿಗೆ ತೆರಳಿದರು. ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎಲ್.ಹೆಚ್. ಅರುಣಕುಮಾರ್, ಕಾರ್ಯದರ್ಶಿ ಎಸ್.ಬಸವರಾಜ್, ಉಪಾಧ್ಯಕ್ಷ ಜಿ.ಕೆ.ಬಸವರಾಜ್ ಗೋಪನಾಳು, ಸಹ ಕಾರ್ಯದರ್ಶಿ ಎ.ಎಸ್.ಮಂಜುನಾಥ ಹಾಗೂ ಕಾರ್ಯಕಾರಿ ಸಮಿತಿ ಸದಸ್ಯರು ಹಾಗೂ ವಕೀಲರು ಇದ್ದರು.

### ಕಟ್ಟಡದ ಮಾಲೀಕರಿಂದ ಅರ್ಜಿ ಆಹ್ವಾನ

**ದಾವಣಗೆರೆ** : ನಗರ ವ್ಯಾಪ್ತಿಯಲ್ಲಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯ ಮಂಜೂರಾಗಿದ್ದು, ನಿಲಯ ನಡೆಸಲು 900 ಚದರ ಮೀಟರ್ ವಿಸ್ತೀರ್ಣವುಳ್ಳ ಮೂಲಭೂತ ಸೌಲಭ್ಯವಿರುವ ಸುಸಜ್ಜಿತವಾದ ಕಟ್ಟಡದ ಮಾಲೀಕರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ಕಟ್ಟಡದ ಮಾಲೀಕರು ಆಗಸ್ಟ್ 25 ರೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಅಂಚೆ ಮೂಲಕ ಅಥವಾ ಖುದ್ದಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ತಾಲ್ಲೂಕು ಕಲ್ಯಾಣಾಧಿಕಾರಿ ಜಿ. ಮಲ್ಲಿಕಾರ್ಜುನಪ್ಪ ಸಂಪರ್ಕಿಸಲು ತಿಳಿಸಿದ್ದಾರೆ.

## ಶಾಸಕರಿಗೆ ಸಹಕಾರ ಬ್ಯಾಂಕ್ ವತಿಯಿಂದ ಸನ್ಮಾನ




ಚಿತ್ರದುರ್ಗ: ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಟಿ.ರಘುಮೂರ್ತಿ ರವರು ಚಿತ್ರದುರ್ಗ ನಗರದ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಸಭಾಂಗಣದಲ್ಲಿ ನಡೆದ ಬೋರ್ಡ್ ಮೀಟಿಂಗ್ ನಲ್ಲಿ ಪಾಲ್ಗೊಂಡು ಮಾತನಾಡಿದರು. ಚಿತ್ರದುರ್ಗ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಸಭಾಂಗಣದಲ್ಲಿ ನಡೆದ ಬೋರ್ಡ್ ಮೀಟಿಂಗ್ ನಲ್ಲಿ ಪಾಲ್ಗೊಂಡು ಮಾತನಾಡಿದರು. ಈ ಸಂದರ್ಭದಲ್ಲಿ ಉಪಾಧ್ಯಕ್ಷ ಮಂಜುನಾಥ್, ವ್ಯವಸ್ಥಾಪಕ ನಿರ್ದೇಶಕ ಇಲ್ಯಾಲ್ ಉಲ್ಲಾ ಶಾರೀಪ ಹಾಗೂ ನಿರ್ದೇಶಕರುಗಳು, ಮತ್ತು ಬ್ಯಾಂಕ್ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಆಲಘಟ್ಟ ಗ್ರಾ.ಪಂ. ಅಧ್ಯಕ್ಷರಾಗಿ ಕೆಎಂ ನಾಗರಾಜಪ್ಪ ಅವಿರೋಧ ಆಯ್ಕೆ



**ಚಿತ್ರದುರ್ಗ** : ಸಿರಿಗೆರೆ ಸಮೀಪದ ಆಲಘಟ್ಟ ಗ್ರಾಮದಲ್ಲಿ ಇಂದು ಗ್ರಾಮ ಪಂಚಾಯಿತಿ ಅಧ್ಯಕ್ಷರ ಮತ್ತು ಉಪಾಧ್ಯಕ್ಷರ ಚುನಾವಣೆ ನಡೆಸಲಾಯಿತು.

ಚುನಾವಣೆಯಲ್ಲಿ ಆಲಘಟ್ಟ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾಗಿ ಕೆಎಂ ನಾಗರಾಜಪ್ಪ ನವರು ಆಯ್ಕೆಯಾಗಿದ್ದಾ- ರೆ ಇನ್ನು ಉಪಾಧ್ಯಕ್ಷರಾಗಿ ಲಲಿತಮ್ಮ ಆಯ್ಕೆಯಾಗಿದ್ದಾರೆ.

ಗ್ರಾಮ ಪಂಚಾಯತಿಯ ಸದಸ್ಯರೆಲ್ಲರೂ ಸೇರಿ ಅಧ್ಯಕ್ಷರ ಸ್ಥಾನಕ್ಕೆ ಕೆ.ಎಂ ನಾಗರಾಜಪ್ಪ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಿದ್ದಾರೆ. ಉಪಾಧ್ಯಕ್ಷರ ಸ್ಥಾನಕ್ಕೆ ಇಬ್ಬರು ನಾಮಪತ್ರಗಳನ್ನು ಸಲ್ಲಿಸಿದ್ದು ಕೋಣನೂರು ಗ್ರಾಮದ ಮಹಿಳಾ ಸದಸ್ಯ 12 ಮತಗಳನ್ನು ಪಡೆಯುವುದರ ಮೂಲಕ ಸ್ಥಾನವನ್ನು ಪಡೆದುಕೊಂಡಿದ್ದಾರೆ.

ಗ್ರಾಮ ಪಂಚಾಯಿತಿಯ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಸ್ಥಾನ ಘೋಷಣೆ ಆಗುತ್ತಿದ್ದಂತೆಯೇ ಅಭಿಮಾನಿಗಳು ಗ್ರಾಮದ ಶ್ರೀರಂಗನಾಥ ದೇವಸ್ಥಾನದ ಮುಂಭಾಗದಲ್ಲಿ ಪಟಾಕಿಯನ್ನು ಸೇರಿಸಿ ಸಂಭ್ರಮಿಸಿದ್ದಾರೆ. ಅಧ್ಯಕ್ಷ ಕೆಎಂ ನಾಗರಾಜಪ್ಪ ಮತ್ತು ಉಪಾಧ್ಯಕ್ಷೆ ಲಲಿತಮ್ಮ ಆಲಘಟ್ಟ ಗ್ರಾಮದ ಶ್ರೀರಂಗನಾಥ ಸ್ವಾಮಿ, ಶ್ರೀ ಬಸವೇಶ್ವರ ಸ್ವಾಮಿಯ ದೇವಾಲಯಕ್ಕೆ ತೆರಳಿ ವಿಶೇಷ ಪೂಜೆಯನ್ನು ಸಲ್ಲಿಸಿ ಸಂಭ್ರಮಿಸಿದ್ದಾರೆ.

ಈ ಒಂದು ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಬಸವರಾಜ್, ಕಾರ್ಯದರ್ಶಿ ನಾಗರಾಜ್, ಆಲಘಟ್ಟ ಗ್ರಾಮ ಪಂಚಾಯತಿ ಸದಸ್ಯರಾದ ಬಸವರಾಜ್ ,ಪಾಂಡು , ರಮೇಶ್, ರಾಮಪ್ಪ, ತ್ರಿವೇಣಿ, ಓಬಜ್ಜ ಹಾಗೂ ಗ್ರಾಮಸ್ಥರಾದ ರಂಗಪ್ಪ, ಸಿದ್ದೀರಪ್ಪ, ತಿಮ್ಮಣ್ಣ,ನಾಗರಾಜ್ ,ಶ್ರೀನಿವಾಸ್,ಚಂದ್ರಪ್ಪ, ರೇವಣ್ಣ, ಪುನೀತ್, ಸುಧಾಕರ್, ಕೆಂಚವೀರಪ್ಪ, ರುದ್ರಮುನಿ, ಡಾ.ಚಂದ್ರಶೇರ್ ಇತರರು ಇದ್ದರು.

## ಬುಡ್ನಹಟ್ಟಿ ಗ್ರಾ.ಪಂ. ಅಧ್ಯಕ್ಷ ಉಪಾಧ್ಯಕ್ಷರಾಗಿ ಆಯ್ಕೆ



**ಚಳ್ಳಕೆರೆ** : ತಾಲ್ಲೂಕಿನ ಬುಡ್ನಹಟ್ಟಿ ಗ್ರಾಮ ಪಂಚಾಯಿತಿ ಎರಡನೇ ಅವಧಿಯ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಆಯ್ಕೆಗಾಗಿ ಚುನಾವಣೆ ನಡೆದಿದ್ದು ತಹಶೀಲ್ದಾರ್ ರೇಹಾನ್ ಪಾಷ ಚುನಾವಣಾಧಿಕಾರಿಯಾಗಿ ಕಾರ್ಯನಿರ್ವಹಿಸಿದರು.

ಪ್ರಸ್ತುತ ಗ್ರಾಮ ಪಂಚಾಯಿತಿಯಲ್ಲಿ ಒಟ್ಟು 20 ಚುನಾಯಿತ ಸದಸ್ಯರಿದ್ದು, ಶುಕ್ರವಾರ ನಡೆದ ಅಧ್ಯಕ್ಷ, ಉಪಾಧ್ಯಕ್ಷ ಚುನಾವಣೆ ಪ್ರಕ್ರಿಯೆಯಲ್ಲಿ ಎಲ್ಲಾ ಸದಸ್ಯರು ಭಾಗವಹಿಸಿದ್ದರು. ಅಂತಿಮವಾಗಿ ಬೋರಪ್ಪನಹಟ್ಟಿಯ ಸುಮಲತಾ ಅಧ್ಯಕ್ಷರಾಗಿ, ದುಗ್ಗಾವರ ಗ್ರಾಮದ ಪಿ.ರಾಮಣ್ಣ ಉಪಾಧ್ಯಕ್ಷರಾಗಿ ಆಯ್ಕೆಯಾದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾದ ಲಕ್ಷ್ಮಕ್ಕರಂಗಸ್ವಾಮಿ, ಕುಮಾರ್, ರವಿಕುಮಾರ್ ಲಕ್ಷ್ಮಕ್ಕ, ಪಾಪಮ್ಮ, ಲಕ್ಷ್ಮಿದೇವಿ, ಮುಖಂಡರಾದ ಸುನಿಲ್‌ಕುಮಾರ್, ಚನ್ನಪ್ಪ, ಗುತ್ತಿಗೆದಾರರಂಗಸ್ವಾಮಿ, ಬೋರಣ್ಣ ಮುಂತಾದವರು ಉಪಸ್ಥಿತರಿದ್ದರು.

## ಚಿಕ್ಕಬ್ಯಾಲದಕೆರೆ ಗ್ರಾ.ಪಂ. ಅಧ್ಯಕ್ಷ ಉಪಾಧ್ಯಕ್ಷರಾಗಿ ಆಯ್ಕೆ



**ಚಿತ್ರದುರ್ಗ** : ಹೊಸದುರ್ಗ ತಾಲ್ಲೂಕು ಚಿಕ್ಕಬ್ಯಾಲದಕೆರೆ ಗ್ರಾಮ ಪಂಚಾಯಿತಿ ಅಧ್ಯಕ್ಷೆಯಾಗಿ ಪರಿಶಿಷ್ಟ ಜಾತಿಯ ಶ್ರೀಮತಿ ತುಳಸಮ್ಮ ನಾಗಪ್ಪ, ಉಪಾಧ್ಯಕ್ಷೆಯಾಗಿ ಹಿಂದುಳಿದ ವರ್ಗಕ್ಕೆ ಸೇರಿದ ಶ್ರೀಮತಿ ಜಾನಕಿ ನೀಲಕಂಠ ಇವರುಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಗುರುವಾರ ನಡೆದ ಚುನಾವಣೆಯಲ್ಲಿ ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನಕ್ಕೆ ಇಬ್ಬರೆ ನಾಮಪತ್ರ ಸಲ್ಲಿಸಿದ್ದರಿಂದ ಅವಿರೋಧವಾಗಿ ಆಯ್ಕೆಗೊಂಡರು.

ಕ್ಷೇತ್ರ ಶಿಕ್ಷಣಾಧಿಕಾರಿ ಸೈಯದ್ ಮೋಸಿನ್ ಚುನಾವಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದರು.

## ನಗರದ ಸ್ವಚ್ಛತೆಗೆ ಆದ್ಯತೆ ನೀಡಿ : ಬಿ.ಎಸ್.ಪಾಟೀಲ್




**ಚಿತ್ರದುರ್ಗ** : ಐತಿಹಾಸಿಕ ಚಿತ್ರದುರ್ಗ ನಗರದ ಸ್ವಚ್ಛತೆಗೆ ನಗರಸಭೆ ಅಧಿಕಾರಿಗಳು ಆದ್ಯತೆ ನೀಡಬೇಕು. ಈಗಿನ ತ್ಯಾಜ್ಯ ವಿಲೇವಾರಿ ನಿರ್ವಹಣಾ ವ್ಯವಸ್ಥೆ ಅತ್ಯಂತ ಕಳೆಪೆಯಾಗಿದೆ. ನಗರದ ಸ್ವಚ್ಛತೆ ಬಗ್ಗೆ ಗಮನ ವಹಿಸದೆ, ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯವಾಗಿ ಪ್ರಕರಣಗಳನ್ನು ದಾಖಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಕರ್ನಾಟಕ ಲೋಕಾಯುಕ್ತರಾದ ನ್ಯಾಯಮೂರ್ತಿ ಬಿ.ಎಸ್.ಪಾಟೀಲ್ ಹೇಳಿದರು.

ಶುಕ್ರವಾರ ಚಿತ್ರದುರ್ಗ ನಗರಕ್ಕೆ ಭೇಟಿ ನೀಡಿದ ಅವರು, ಮುಂಜಾನೆ ನಗರದ ಪ್ರಮುಖ ಬೀದಿಗಳಲ್ಲಿ ಸಂಚಾರ ನಡೆಸಿ, ಬಳಿಕ ಕಲುಷಿತ ನೀರು ಪ್ರಕರಣದಲ್ಲಿ ಸಾರ್ವಜನಿಕರು ಅಸ್ವಸ್ಥಗೊಂಡ ಕವಾಡಿಗರ ಹಟ್ಟಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ನಂತರ ನಗರದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು.

ಚಿತ್ರದುರ್ಗ ನಗರದ ತ್ಯಾಜ್ಯ ವಿಲೇವಾರಿ ನಿರ್ವಹಣೆ, ಸ್ವಚ್ಛತೆ ದಯನೀಯ ಸ್ಥಿತಿಯಲ್ಲಿದೆ. ಇಂತಹ ಪರಿಸ್ಥಿಯಲ್ಲಿ ಜನರಿಗೆ ಯಾವುದೇ ರೋಗ ರುಜಿನಗಳು ಬರಬಹುದು. ಸಾಂಕ್ರಮಿಕ ರೋಗಗಳು ಹರಡಬಹುದು. ಜನರ ಜೀವಕ್ಕೆ ಅಪಾಯವಾಗಬಹುದು. ನಗರದ ರಸ್ತೆಗಳಲ್ಲಿ ಎಲ್ಲೆಂದರಲ್ಲಿ ಕಸ, ಕಡ್ಡಿ, ಪ್ಲಾಸ್ಟಿಕ್, ಉಳಿದ ಆಹಾರಗಳನ್ನು ಜನರು ಚೆಲ್ಲುತ್ತಿದ್ದಾರೆ. ಖಾಲಿ ನಿವೇಶನಗಳು ತ್ಯಾಜ್ಯ ಸುರಿಯುವ ಸ್ಥಳಗಳಾಗಿ ಬದಲಾಗಿವೆ. ಇಂತಹ ಸ್ಥಳಗಳ ಪೋ-ಟೋ ತೆಗೆದುಕೊಂಡು ಲೋಕಾಯುಕ್ತದಲ್ಲಿ ಪ್ರಕರಣ ದಾಖಲಿಸಲಾಗಿದೆ. ಸ್ಥಳೀಯ ಲೋಕಾಯುಕ್ತ ಅಧಿಕಾರಿಗಳು ಮೂರು ದಿನಗಳ ನಂತರ ಮತ್ತೆ ಈ ಸ್ಥಳಗಳಿಗೆ ಭೇಟಿ ನೀಡಿ, ಪೋಟೋ ಸಹಿತ ವರದಿಯನ್ನು ಕಳುಹಿಸಿಕೊಡುವರು. ಅಧಿಕಾರಿಗಳು ಎಚ್ಚೆತ್ತು ಕೆಲಸ ನಿರ್ವಹಿಸದೇ ಹಾಗೇ ಮುಂದುವರಿದರೆ ಅವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುವುದು ಎಂದರು.

ನಗರದ ಹೊಳೆಲ್ಕೆರೆ ರಸ್ತೆಯಲ್ಲಿ ದೊಡ್ಡ ಚರಂಡಿಯಲ್ಲಿ ಗಿಡ ಗಂಟೆಗಳು ಬೆಳೆದು ಸರಾಗವಾಗಿ ನೀರು ಹರಿದುಹೋಗಲು ತೊಂದರೆಯಾಗುತ್ತಿರುವುದನ್ನು ಗಮನಿಸಲಾಗಿದೆ, ಇಲ್ಲಿ ಸೊಳ್ಳೆ, ನೋಣಗಳು ಹುಟ್ಟಿ ರೋಗ ಹರಡಲು ದಾರಿಯಾಗುತ್ತದೆ. ಚರಂಡಿ ಸ್ವಚ್ಛಗೊಳಿಸಲು ಯಾವುದೇ ಅನುದಾನ ಬೇಕಿಲ್ಲ. ಇದು ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳ ನಿರ್ಲಕ್ಷ್ಯ ಧೋರಣೆಯ ಪ್ರತೀಕವಾಗಿದೆ. ಇದನ್ನು ಗಂಭೀರವಾಗಿ ಪರಿಗಣಿಸಲಾಗಿದೆ ಎಂದರು.

ನಗರದಲ್ಲಿ ಖಾಲಿ ಇರುವ ನಿವೇಶನಗಳ ಮಾಲೀಕರಿಗೆ ನಗರಸಭೆ ವತಿಯಿಂದ ನೋಟಿಸ್ ನೀಡಿ, ಖಾಲಿ ನಿವೇಶಗಳನ್ನು ಸ್ವಚ್ಛಗೊಳಿಸುವಂತೆ ತಾಕೀತು ಮಾಡಬೇಕು. ಮಾಲಿಕರು ಸ್ವಚ್ಛಗೊಳಿಸದೇ ಇದ್ದರೆ, ನಗರ ಸಭೆಯಿಂದಲೇ ಸ್ವಚ್ಛಗೊಳಿಸಿ ದಂಡ ಸಹಿತವಾಗಿ ಮಾಲೀಕರಿದಂದ ಹಣ ವಸೂಲಿ ಮಾಡುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದೇನೆ. ನಗರಸಭೆ ಅಧಿಕಾರಿಗಳು ಎಚ್ಚೆತ್ತುಕೊಂಡು ಕೆಲಸ ನಿರ್ವಹಿಸದೇ ಇದ್ದಲ್ಲಿ, ಸ್ಥಳೀಯ ಲೋಕಾಯುಕ್ತ ಅಧಿಕಾರಿಗಳಿಂದ ವರದಿ ತರಿಸಿಕೊಂಡು ಅವರ ವಿರುದ್ಧ ಪ್ರಕರಣ ದಾಖಲಿಸಿ ವಿಚಾರಣೆ ನಡೆಸಲಾಗುವುದು ಎಂದರು.

ಕವಾಡಿಗರಹಟ್ಟಿಯಲ್ಲಿನ ಕಲುಷಿತ ನೀರು ಸೇವಿಸಿ 5 ಜನ ಮೃತಪಟ್ಟಿದ್ದಾರೆ. ತಜ್ಞರ ತಂಡ ಪರಿಶೀಲನೆ ನಡೆಸಿ ವರದಿ ನೀಡಲಿದೆ. ಹಟ್ಟಿಯಲ್ಲಿ ಕುಡಿಯುವ ನೀರಿನ ಪೈಪ್ ಲೈನ್, ಚರಂಡಿ, ಹಾಗೂ ಶೌಚಾಲಯ ಗುಂಡಿಗಳು ಪಕ್ಕ ಪಕ್ಕದಲ್ಲಿ ಹಾದು ಹೋಗಿವೆ. ಪೈಪ್ ಲೈನ್ ಹೊಡೆದು ನೀರು ಕಲುಷಿತಗೊಳ್ಳುವ ಸಂಭವ ಹೆಚ್ಚಿದೆ. ಕವಾಡಿಗರ ಹಟ್ಟಿಯಲ್ಲಿ ಇನ್ನೂ ಬಯಲು ಶೌಚ ಪದ್ಧತಿಯಿದೆ. ಈ ಎಲ್ಲಾ ಕಾರಣಗಳಿಂದ ಕಾಲರಾ ಉಲ್ಬಣಿಸುವ ಸಾಧ್ಯತೆಯಿದೆ ಎಂದು ಅಧಿಕಾರಿಗಳು ಅಭಿಪ್ರಾಯ ಪಟ್ಟಿದ್ದಾರೆ.

ನಗರದ ಮಲ್ಲಾಪುರ ಹಾಗೂ ಮುರುಘಾಮಠದ ಎದರುರಿನ ಕೆರೆಗಳಿಗೆ ಚರಂಡಿ ನೀರು ಹೋಗಿ ಸೇರುತ್ತಿದೆ. ಇದರಿಂದ ನೀರು ಕಲುಷಿತಗೊಂಡು ಜನ ಜಾನುವಾರು ಕುಡಿಯುಲು ಯೋಗ್ಯವಾಗಿಲ್ಲ. ಇಲ್ಲಿ ಕೊಳಚೆ ನೀರು ಶುದ್ಧೀಕರಣ ಘಟಕಗಳನ್ನು ಸ್ಥಾಪಿಸಿ, ಚರಂಡಿ ನೀರನ್ನು ಸ್ವಚ್ಛಗೊಳಿಸಿ ಕೆರಗೆ ಬಿಡುವ ಕೆಲಸವಾಗಬೇಕು. ಜಿಲ್ಲೆಯ ಪರಿಸರ ಅಧಿಕಾರಿಗಳನ್ನು ಕರೆದುಕೊಂಡು ಹೋಗಿ ಸ್ಥಳ ಪರಿಶೀಲನೆ ನಡೆಸಿ ವರದಿ ನೀಡಬೇಕು. ಕೊಳಚೆ ನೀರು ಶುದ್ಧೀಕರಣ ಘಟಕ ಸ್ಥಾಪಿಸುವ ಕುರಿತು ಜಿಲ್ಲಾಧಿಕಾರಿಗಳು ಯೋಜನಾ ವರದಿ ಸಿದ್ದಪಡಿಸಿ ಕ್ರಮಕೈಗೊಳ್ಳಬೇಕು ಎಂದು ಲೋಕಾಯುಕ್ತ ನಾಯಮೂರ್ತಿ ಬಿ.ಎಸ್.ಪಾಟೀಲ್ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿ ವಾಸುದೇವರಾಮ್, ಡಿವೈಎಸ್‌ಪಿ ಮೃತ್ಯುಂಜಯ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಧಿಕಾರಿ ಡಾ.ಆರ್.ರಂಗನಾಥ್ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಇದ್ದರು.

## ಫಾಸ್ಟ್ ನ್ಯೂಸ್

# ಗಂಟೆ ಗೋಪುರ ಕಳಸ ಸ್ಥಾಪನೆ



**ಚಿತ್ರದುರ್ಗ** ; ಜಿಲ್ಲೆಯ ಪುರಾತನ ಐತಿಹಾಸಿಕ ಹಿನ್ನಲೆ ಹೊಂದಿರುವ ಶ್ರೀ–ಕ್ಷೇತ್ರ ಕ್ಯಾಸಪುರ ಗ್ರಾಮದ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದ ಗಂಟೆ ಗೋಪುರ ಕಳಸ ಸ್ಥಾಪನೆ ಧಾರ್ಮಿಕ ಕಾರ್ಯಕ್ರಮಗಳು ಇದೇ ತಿಂಗಳು 18 ಮತ್ತು 19 ರಂದು ನಡೆಯಲಿದೆ.

ಈ ಬಗ್ಗೆ ಶ್ರೀದೇವಸ್ಥಾನದ ಪ್ರಧಾನ ಅರ್ಚಕ ಹಾಗೂ ದೇವಸ್ಥಾನ ಸಮಿತಿ ಅಧ್ಯಕ್ಷ ನಾಗಭೂಷಣ ಶಾಸ್ತ್ರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದಿ.18ರಂದು ಬೆಳಿಗ್ಗೆ 8.30ಕ್ಕೆ ಧ್ವಜಾರೋಹಣ, ಗಣಪತಿ ಪೂಜೆ, ಪುಣ್ಯಾಹ ವಾಚನ, ದೇವನಾಂದಿ, ಕಂಕಣಧಾರಣೆ, ಅಂಕಣರೋರ್ಪಣೆ, ಕಳಸಕ್ಕೆ ಪಂಚಗವ್ಯ ಶುದ್ಧಿ, ಮಧ್ಯಾಹ್ನ 12.30 ರಿಂದ ಮಹಾಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ, ಸಂಜೆ 6 ಗಂಟೆಗೆ ಕಳಶಕ್ಕೆ ಆದಿವಾಸ, ರಾಕ್ಷೋಘ್ನ ಹೋಮ, ಅದೇ ಅಗ್ನಿಯಿಂದ ಆಲಯಕ್ಕೆ ಪರ್ಯಾಗ್ನಿಕರಣ, ರಾತ್ರಿ 9 ಗಂಟೆಗೆ ಪೂರ್ಣಾಹುತಿ, ಮಹಾಮಂಗಳಾರತಿ ಹಾಗೂ 9–30ಕ್ಕೆ ಶೈನಾಧಿವಾಸ ನೆರವೇರಲಿದೆ.

ದಿನಾಂಕ 19 ರಂದು ಶ್ರೀಸ್ವಾಮಿಗೆ ವಿಶೇಷ ಅಭಿಷೇಕ, ಅಲಂಕಾರ, ಕಳಸಕ್ಕೆ ತತ್ವ ಕಲಾನ್ಯಾಸ, ಪ್ರಧಾನ ಹೋಮ ಮತ್ತು ಉಪಹೋಮಗಳು, ಮಹಾ ಪೂರ್ಣಾಹುತಿ, ನಂತರ ಮಧ್ಯಾಹ್ನ 11 ಗಂಟೆಯಿಂದ ಗಂಗೆ ಪೂಜೆಯೊಂದಿಗೆ ಸಕಲ ವಾದ್ಯಗಳೊಂದಿಗೆ ಮೆರವಣಿಗೆ ಮೂಲಕ ಶ್ರೀ ಕ್ಷೇತ್ರ ಬೆಲಗೂರು ಶ್ರೀಗಳಾದ ಶ್ರೀ ವಿಜಯ ಮಾರುತಿ ಶರ್ಮ ಇವರ ಅಮೃತ ಹಸ್ತದಿಂದ ಗಂಟಾಗೋಪುರದ ಕಳಸ ಸ್ಥಾಪನೆ ನೆರವೇರಲಿದೆ.

ನಂತರ ಕುಂಬಾಭಿಷೇಕ, ಮಹಾ ಮಂಗಳಾರತಿ, ಗುರುಗಳಿಂದ ಆಶೀರ್ವಚನ ನೆರವೇರಲಿದೆ.

ಈ ಎಲ್ಲಾ ಕಾರ್ಯಕ್ರಮಗಳಲ್ಲಿ ಸದ್ಭಕ್ತರು ಭಾಗವಹಿಸಿ, ಶ್ರೀ ಆಂಜನೇಯ ಸ್ವಾಮಿ ಕೃಪೆಗೆ ಪಾತ್ರರಾಗಬೇಕೆಂದು ದೇವಸ್ಥಾನ ಸಮಿತಿಯ ಕಾರ್ಯದರ್ಶಿಗಳಾದ ಕೆ.ವಿ.ಮಂಜುನಾಥ, ಉಪಾಧ್ಯಕ್ಷರಾದ ವಿ.ವಿಶ್ವನಾಥಪ್ಪ, ಖಜಾಂಚಿ ಸಿ.ಶರಣಪ್ಪ ಹಾಗೂ ಕ್ಯಾಸಪುರ ಗ್ರಾಮಸ್ಥರು ಮನವಿ ಮಾಡಿದ್ದಾರೆ. (ಸಂಪರ್ಕಕ್ಕೆ; 9108106794, 9980424370).

# ಜಾನಕಮ್ಮ ನಿಧನ



ಚಳ್ಳಕೆರೆ : ಕಾಂಗ್ರೆಸ್ ಪಕ್ಷದ ಹಿರಿಯ ರಾಜ–ಕಾರಣಿ ದಿವಂಗತ ನಾರಾಯಣಮೂರ್ತಿಯವರ ಪತ್ನಿ ಶ್ರೀವೆಂಕಟಸಾಯಿ ಸೇವಾ ಟ್ರಸ್ಟ್‌ನ ಅಧ್ಯಕ್ಷ ಬಿ.ಸಿ.ಸಂಜೀವಮೂರ್ತಿ ಯವರ ದೊಡ್ಡಮ್ಮ ಜಾನಕಮ್ಮ(87) ನರಹರಿನಗರದ ಸ್ವಗೃಹದಲ್ಲಿ ಶುಕ್ರವಾರ ಬೆಳಗ್ಗೆ ನಿಧನರಾಗಿರುತ್ತಾರೆ.

ಜಾನಕಮ್ಮ ಸಾರ್ವಜನಿಕವಾಗಿ ಹೆಚ್ಚು ಪರಿಚಿತರಿದ್ದು, ರಾಜಕೀಯ ಕ್ಷೇತ್ರದಲ್ಲೂ ಸಹ ತಮ್ಮ ಪ್ರಭಾವವನ್ನು ಹೊಂದಿದ್ದರು. ಕಳೆದ 1991ರಲ್ಲಿ ನಗರಂಗೆ–ರೆ ಮಂಡಲಪಂಚಾಯಿತಿಯ ಅಧ್ಯಕ್ಷರಾಗಿ ಐದು ವರ್ಷ ನಗರಂಗೆರೆ ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಿ ಒಂದು ವರ್ಷ ಒಟ್ಟು ಆರು ವರ್ಷಗಳ ಕಾಲ ಸೇವೆ ಸಲ್ಲಿಸಿದ್ದರು. ಇವರ ಪತಿ ದಿ.ನಾರಾಯಣಮೂರ್ತಿ ರಾಜ್ಯ ಕೆಪಿಸಿಸಿ ಸದಸ್ಯರು ಹಾಗೂ ಪ್ರಭಾವಿ ಮುಖಂಡರಾಗಿದ್ದರು. ಜಾನಕಮ್ಮನವರು ನಾಲ್ಕು ಹೆಣ್ಣು ಹಾಗೂ ಅಪಾರ ಬಂಧುಬಳಗವನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ನರಹರಿನಗರದ ತೋಟದಲ್ಲಿ ಬಲಿಜ ಸಂಪ್ರದಾಯದಂತೆ ನಡೆಯಿತು.

# ಜಯಮ್ಮ ನಿಧನ



**ಚಳ್ಳಕೆರೆ** : ತಾಲ್ಲೂಕಿನ ಆಟೋ ಮೊಬೈಲ್ಸ್ ಕ್ಷೇತ್ರದಲ್ಲಿ ತನ್ನದೇ ವೈಶಿಷ್ಟ್ಯತೆಯನ್ನು ಹೊಂದಿದ್ದ ದಿವಂಗತ ಕೃಷ್ಣಪ್ಪನವರ ಪತ್ನಿ ಜಯಮ್ಮ(75) ಕಳೆದ ಕೆಲವು ತಿಂಗಳಿನಿಂದ ಅಸ್ವಸ್ಥರಾಗಿದ್ದು, ಶುಕ್ರವಾರ ಬೆಳಗ್ಗೆ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾಗಿರುತ್ತಾರೆ.

ನಾಲ್ವರು ಹೆಣ್ಣು, ಓರ್ವ ಪುತ್ರ ಹಾಗೂ ಅಪಾರ ಬಂಧುಬಳಗವನ್ನು ಅಗಲಿದ್ದಾರೆ.ಜಯಮ್ಮನವರ ಅಂತ್ಯಕ್ರಿಯೆ ಬಲಿಜ ಸಮಾಜದ ಪದ್ಧತಿಯಂತೆ ಆ.12ರ ಶನಿವಾರ ನಗರದ ರುದ್ರಭೂಮಿಯಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

# ಸಿಬಿಐ ತನಿಖೆಗೆ ಒತ್ತಾಯಿಸಿ ಕರುನಾಡ ವಿಜಯಸೇನೆ




**ಕವಾಡಿಗರಹಟ್ಟಿ ಕಲುಷಿತ ನೀರು ಸೇವನೆ ಪ್ರಕರಣವನ್ನು ಸಿಬಿಐ.ಗೆ ವಹಿಸುವಂತೆ ಕರುನಾಡ ವಿಜಯಸೇನೆಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ**

**ಚಿತ್ರದುರ್ಗ** : ಕವಾಡಿಗರಹಟ್ಟಿಯಲ್ಲಿ ಕಲುಷಿತ ನೀರು ಸೇವಿಸಿ ಐವರು ಮತೃಪಟ್ಟು, ಇನ್ನೂರಕ್ಕೂ ಹೆಚ್ಚು ಮಂದಿ ಅಸ್ವಸ್ಥರಾಗಿರುವುದನ್ನು ಸಿಬಿಐ. ತನಿಖೆಗೆ ಒಪ್ಪಿಸುವಂತೆ ಒತ್ತಾಯಿಸಿ ಕರುನಾಡ ವಿಜಯಸೇನೆ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಶುಕ್ರವಾರ ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿ ಮೂಲಕ ರಾಜ್ಯದ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು.

ಹೊಳಲ್ಕೆರೆ ರಸ್ತೆಯಲ್ಲಿರುವ ಸಂಗೊಳ್ಳಿ ರಾಯಣ್ಣ ವೃತ್ತದಿಂದ ಮೆರವಣಿಗೆ ಮೂಲಕ ಆಗಮಿಸಿದ ಪ್ರತಿಭಟನಾಕಾರರು ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ನಂತರ ಜಿಲ್ಲಾಧಿಕಾರಿ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು.

ಮೃತ ಕುಟುಂಬಕ್ಕೆ ತಲಾ ಒಂದು ಕೋಟಿ ರೂ.ಪರಿಹಾರ ಘೋಷಿಸಿ. ಕುಟುಂಬದಲ್ಲಿ ಒಬ್ಬರಿಗೆ ಸರ್ಕಾರಿ ನೌಕರಿ ಕೊಡಬೇಕು.

ಕವಾಡಿಗರಹಟ್ಟಿಯ ದಲಿತ ಕುಟುಂಬಗಳು ಸಂಘ ಸಂಸ್ಥೆಗಳಿಂದ ಪಡೆದಿರುವ ಸಾಲವನ್ನು ಮನ್ನಾ ಮಾಡಬೇಕು.

ಕವಾಡಿಗರಹಟ್ಟಿಯಲ್ಲಿ ಹೊಸದಾಗಿ ನಗರ ಆರೋಗ್ಯ ಕೇಂದ್ರವನ್ನು ಸ್ಥಾಪಿಸಬೇಕು.

ಕವಾಡಿಗರಹಟ್ಟಿಯ ದಲಿತ ಕಾಲೋನಿಗೆ ಮೂರು ಕೊಳವೆ ಬಾವಿಗಳನ್ನು ಕೊರೆಸಿ ಹೊಸದಾಗಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ತೆರೆಯಬೇಕು.

ತಲಾ ಇಪ್ಪತ್ತು ಲಕ್ಷ ರೂ.ವೆಚ್ಚದಲ್ಲಿ ಮೃತ ಕುಟುಂಬಕ್ಕೆ ಮನೆಗಳನ್ನು ನಿರ್ಮಿಸಿ ಸುಸಜ್ಜಿತ ಚರಂಡಿ, ರಸ್ತೆ ನಿರ್ಮಿಸಿ ಬೀದಿ ದೀಪಗಳನ್ನು ಅಳವಡಿಸಿ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು.

ಮೃತಪಟ್ಟಿರುವ ಮಂಜುಳರವರ ಎರಡು ವರ್ಷದ ಹೆಣ್ಣು ಮಗುವಿಗೆ ಪ್ರತಿಷ್ಠಿತ ಶಾಲಾ–ಕಾಲೇಜುಗಳಲ್ಲಿ ಪದವಿವರೆಗೂ ಸರ್ಕಾರ ಉಚಿತ ಶಿಕ್ಷಣ ಕೊಡಿಸಬೇಕು.

ಪೊಲೀಸ್ ಇಲಾಖೆ ಸ್ವಯಂ ಪ್ರೇರಿತವಾಗಿ ಸುಮೋಟೋ ಕೇಸು ದಾಖಲಿಸಬೇಕು.

ಈ ಘಟನೆಗೆ ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳನ್ನು ಸೇವೆಯಿಂದ ವಜಾಗೊಳಿ. ಸಮಾಜ ಕಲ್ಯಾಣ ಇಲಾಖೆಯಿಂದ ಸಿಗಬಹುದಾದಂತ ಎಲ್ಲಾ ಸೌಲಭ್ಯಗಳನ್ನು ಅಸ್ವಸ್ಥಗೊಂಡಿರುವ ಪ್ರತಿ ಮನೆಯ ಕುಟುಂಬದವರಿಗೆ ತಲುಪಿಸಿ ತಲಾ ಎರಡು ಲಕ್ಷ ರೂ.ಗಳ ಪರಿಹಾರವನ್ನು ಅಸ್ವಸ್ಥಗೊಂಡಿರುವವರಿಗೆ ತಕ್ಷಣವೇ ನೀಡಬೇಕು.

ಕವಾಡಿಗರಹಟ್ಟಿಯಲ್ಲಿರುವ ಖಾಲಿ ಜಾಗ ಮತ್ತು ಮನೆಗಳಿಗೆ ಹಕ್ಕುಪತ್ರಗಳನ್ನು ವಿತರಿಸಬೇಕು.

ಎಲ್ಲಾ ಬೇಡಿಕೆಗಳನ್ನು ಈಡೇರಿಸದಿದ್ದರೆ ಆ.15 ರಂದು ಕರಾಳ ದಿನವನ್ನಾಗಿ ಆಚರಿಸಲಾಗುವುದೆಂದು ಪ್ರತಿಭಟನಾಕಾರರು ಸರ್ಕಾರಕ್ಕೆ ಗಡುವು ನೀಡಿದರು.

ಕರುನಾಡ ವಿಜಯಸೇನೆ ರಾಜ್ಯ ಉಪಾಧ್ಯಕ್ಷ ಕೆ.ಆರ್.ಸಚ್ಚಿದಾನಂದ, ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ವೀಣಗೌರಣ್ಣ ಸೇರಿದಂತೆ ಅನೇಕ ಪದಾಧಿಕಾರಿಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ರಾಷ್ಟ್ರೀಯ ಸೇವಾ ಯೋಜನಾ ಶಿಬಿರ : ಸುಧಾದೇವಿ




**ಪಲ್ಲವಗೆರೆಯಲ್ಲಿ ನಡೆದ ಎನ್.ಎಸ್.ಎಸ್. ಶಿಬಿರವನ್ನು ಉದ್ಘಾಟಿಸಿ ಡಾ.ಎಂ.ಎಸ್.ಸುಧಾದೇವಿ ಮಾತನಾಡಿದರು.**

**ಚಿತ್ರದುರ್ಗ** : ರಾಷ್ಟ್ರಪಿತ ಮಹಾತ್ಮಾಗಾಂಧಿಜಿಯವರ ಕನಸಿನಂತೆ ಎನ್.ಎಸ್.ಎಸ್. ಚಟುವಟಿಕೆಗಳು ಗ್ರಾಮಗಳ ಅಭಿವೃದ್ದಿಗೆ ನೆರವಾಗಲಿದೆ ಎಂದು ಸರಸ್ವತಿ ಕಾನೂನು ಕಾಲೇಜಿನ ಪ್ರಾಚಾರ್ಯರಾದ ಡಾ.ಎಂ.ಎಸ್.ಸುಧಾದೇವಿ ಅಭಿಪ್ರಾಯಪಟ್ಟರು.

ಸರಸ್ವತಿ ಕಾನೂನು ಕಾಲೇಜು ಚಿತ್ರದುರ್ಗ ಹಾಗೂ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾನಿಲಯ ಹುಬ್ಬಳ್ಳಿ ಇವರುಗಳ ಸಂಯುಕ್ತಾಶ್ರಯದಲ್ಲಿ ಪಲ್ಲವಗೆರೆಯಲ್ಲಿ ನಡೆದ ರಾಷ್ಟ್ರೀಯ ಸೇವಾ ಯೋಜನಾ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಕಾನೂನು ವಿದ್ಯಾರ್ಥಿಗಳು ಎನ್.ಎಸ್.ಎಸ್. ಮೂಲಕ ಗ್ರಾಮಗಳ ಅಭಿವೃದ್ದಿ ಕುರಿತು ಜನತೆಯಲ್ಲಿ ಅರಿವು ಮೂಡಿಸುವ ಕೆಲಸ ಮಾಡುತ್ತಿದ್ದಾರೆ. ಶಿಬಿರಾರ್ಥಿಗಳು ಗ್ರಾಮೀಣರ ಜೊತೆ ಬೆರೆತು ಯುವ ಪೀಳಿಗೆಗೆ ಮಾರ್ಗದರ್ಶಕರಾಗಿ ಸರ್ಕಾರದಿಂದ ಸಿಗುವ ಸೌಲಭ್ಯಗಳ ಬಗ್ಗೆ ಜಾಗೃತಿ ಮೂಡಿಸುವುದರ ಜೊತೆಗೆ ಸಮಾಜಕ್ಕೆ ಉಪಯುಕ್ತವಾದಂತ ಕೆಲಸಗಳನ್ನು ಕೈಗೊಳ್ಳಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಡಾ.ಎನ್.ಡಿ.ಗೌಡ, ಶ್ರೀಶೈಲ, ಡಾ.ಡಿ.ಬಿ.ರವಿಕುಮಾರ್, ಗ್ರಾಮಸ್ಥರಾದ ಪಿ.ಕೆ.ಬಸವರಾಜ್, ಪಿ.ಎನ್.ರುದ್ರಪ್ಪ, ಪಿ.ಆರ್.ಧನಂಜಯ, ಬಸವರಾಜ್ ಉಪಸ್ಥಿತರಿದ್ದರು. ದೈಹಿಕ ಶಿಕ್ಷಕ ಪಿ.ಸಿ.ಮುರುಗೇಶ್ ಸ್ವಾಗತಿಸಿದರು. ಶ್ರೀನಿವಾಸ್ ವಂದಿಸಿದರು. ಸುಷ್ಮ ನಿರೂಪಿಸಿದರು.

# ಜಿಲ್ಲೆಯ ಏಳಿಗೆಗೆ ಶ್ರಮಿಸಿ : ಬಿ.ಎಸ್.ಪಾಟೀಲ್

**ಚಿತ್ರದುರ್ಗ** : ದುರಾಸೆಗೆ ಬೀಳದೆ ಮಾದರಿ ಅಧಿಕಾರಿಗಳಾಗಿ ಜಿಲ್ಲೆಯ ಏಳಿಗೆಗೆ ಶ್ರಮಿಸಿ ಎಂದು ಕರ್ನಾಟಕ ಲೋಕಾಯುಕ್ತರಾದ ನ್ಯಾಯಮೂರ್ತಿ ಬಿ.ಎಸ್.ಪಾಟೀಲ್ ಅವರು ಅಧಿಕಾರಿಗಳಿಗೆ ಕಿವಿಮಾತು ಹೇಳಿದರು

ಗುರುವಾರ ಚಿತ್ರದುರ್ಗ ಜೋಗಿಮಟ್ಟಿ ಅರಣ್ಯ ಇಲಾಖೆ ಅತಿಥಿ ಗೃಹದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

ಸರ್ಕಾರದ ಆಡಳಿತದಲ್ಲಿ ಪಾರದರ್ಶಕತೆ ಹಾಗೂ ದಕ್ಷತೆ ತರುವ ನಿಟ್ಟಿನಲ್ಲಿ ಕರ್ನಾಟಕ ಲೊಕಾಯುಕ್ತ ಹಾಗೂ ಭಷ್ಟಾಚಾರ ನಿಯಂತ್ರಣ ಕಾಯ್ದೆಯನ್ನು ಜಾರಿಗೊಳಿಸಲಾಗಿದೆ. ಲೋಕಾಯುಕ್ತದ ಅಧಿಕಾರ ವ್ಯಾಪ್ತಿಯಲ್ಲಿ ಸರ್ಕಾರದಲ್ಲಿ ಕೆಲಸ ನಿರ್ವಹಿಸುವ ಎಲ್ಲಾ ಸರ್ಕಾರಿ ನೌಕರರು, ಜನಪ್ರತಿನಿಧಿಗಳು ಬರುತ್ತಾರೆ. ಇವರ ಕಾರ್ಯವೈಖರಿಯಲ್ಲಿ ಅವ್ಯವಹಾರ ಹಾಗೂ ಅದಕ್ಷತೆ ಕಂಡುಬಂದರೆ ಲೋಕಾಯುಕ್ತ ಇವರ ವಿರುದ್ದ ಕ್ರಮ ಕೈಗೊಳ್ಳುವುದು.

ಆಡಳಿತದ ವೈಫಲ್ಯದ ಕಾರಣ ಅಥವಾ ಅಧಿಕಾರಿ ಸಿಬ್ಬಂದಿಗಳು ತಮ್ಮ ತಮ್ಮ ಕರ್ತವ್ಯವನ್ನು ಸರಿಯಾಗಿ ನಿರ್ವಹಿಸದೇ ಇದ್ದಾಗ ಅಹಿತಕರ ಪ್ರಕರಣಗಳು, ಘಟನೆಗಳು ಸಂಭವಿಸುತ್ತವೆ. ಆಡಳಿತದಲ್ಲಿ ಪಾರದರ್ಶಕತೆ, ಭ್ರಷ್ಟಾಚಾರ ದೂರ ಮಾಡುವ ಸಲುವಾಗಿ ಲೋಕಾಯುಕ್ತ ಸಂಸ್ಥೆ ಸ್ಥಾಪಿಸಿದ್ದು, ಸರ್ಕಾರದ ಎಲ್ಲ ಇಲಾಖೆ, ಸ್ಥಳೀಯ ಸಂಸ್ಥೆಗಳು, ಶಾಲಾ ಕಾಲೇಜುಗಳು, ಸರ್ಕಾರದ ಕಂಪನಿಗಳು, ಚುನಾಯಿತ ಪ್ರತಿನಿಧಿಗಳು ಎಲ್ಲರೂ ಇದರ ವ್ಯಾಪ್ತಿಗೆ ಬರುತ್ತಾರೆ. ಲೋಕಾಯುಕ್ತರಿಗೆ ಕುಂದುಕೊರತೆ ಅಥವಾ ಭ್ರಷ್ಟಾಚಾರದ ಬಗ್ಗೆ ದೂರು ಬಂದಲ್ಲಿ, ಮೊದಲು ನಾವು ಅದರ ನೈಜತೆಯನ್ನು ಪರಿಶೀಲಿಸುತ್ತೇವೆ, ನಿರ್ದಿಷ್ಟತೆ ಇದೆಯೇ, ತನಿಖೆಗೆ ಅರ್ಹವಿದೆಯೇ ಎಂಬುದನ್ನು ಕೂಡ ಪರಿಶೀಲಿಸುತ್ತೇವೆ. ಬಳಿಕವೇ ಕ್ರಮ ಕೈಗೊಳ್ಳುತ್ತೇವೆ. ಸುಖಾಸುಮ್ಮನೆ ಆರೋಪಿಸುವ ದೂರುಗಳನ್ನು ನಾವು ಪರಿಗಣಿಸುವುದಿಲ್ಲ, ಕೆಲವು ಬಾರಿ ಘಟನೆ ಹಾಗೂ ಪ್ರಕರಣ ಆಧರಿಸಿ ನಾವೇ ಸ್ವಯಂ ಪ್ರೇರಣೆಯಿಂದ (ಸುಮೋಟೊ) ದೂರು ದಾಖಲಿಸಿಕೊಂಡು ಕ್ರಮ ಜರುಗಿಸುತ್ತೇವೆ. ಆರೋಪ ಸಾಬೀತಾದರೆ ಅವರ ವಿರುದ್ಧ ಲೋಕಾಯುಕ್ತ ಕಠಿಣ ಕ್ರಮ ಕೈಗೊಳ್ಳುತ್ತೇವೆ.

ಪ್ರಸಕ್ತ ವರ್ಷದಲ್ಲಿ ಲೋಕಾಯುಕ್ತ–ಕ್ಕೆ 20 ಸಾವಿರಕ್ಕೂ ಹೆಚ್ಚು ದೂರುಗಳು ಬಂದಿವೆ. ಇವುಗಳನ್ನು ಪರಾಮರ್ಶಿಸಿ ಕ್ರಮಕೈಗೊಳ್ಳಾಗುತ್ತಿದೆ. ಇದಕ್ಕೆಂದೇ ಲೋಕಾಯುಕ್ತದಲ್ಲಿ 27 ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿಗಳು, 48 ಉಪ ಪೊಲೀಸ್ ವರಿಷ್ಠಾಧಿಕಾರಿಗಳು, 35 ರಿಂದ 40 ಲೋಕಾಯುಕ್ತ ನ್ಯಾಯಾಧೀಶರು ಸೇರಿ 1600 ಹೆಚ್ಚು ಜನರು ಕರ್ತವ್ಯ ನಿರ್ವಹಿಸುತ್ತಿದ್ದಾರೆ.



ಜಿಲ್ಲಾಧಿಕಾರಿ ದಿವ್ಯಪ್ರಭು ಜೆ.ಆರ್.ಜೆ, ಪೊಲೀಸ್ ವರಿಷ್ಠಾಧಿಕಾರಿ ಕೆ.ಪರುಶುರಾಮ್, ಲೋಕಾಯುಕ್ತ ಪೊಲೀಷ್ ವರಿಷ್ಠಾಧಿಕಾರಿ ವಾಸುದೇವರಾಮ್, ಡಿವೈಎಸ್‌ಪಿ ಮೃತ್ಯುಂಜಯ ಸೇರಿದಂತೆ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು. ಜಿಲ್ಲೆಗೆ ಆಗಮಿಸಿದ ಲೋಕಾಯಕ್ತ ನ್ಯಾಯಮೂರ್ತಿಗಳಿಗೆ ಗೌರವ ರಕ್ಷೆ ನೀಡಲಾಯಿತು.

# ನ್ಯಾ. ಬಿ.ಎಸ್. ಪಾಟೀಲ್ ಅವರಿಂದ ಕವಾಡಿಗರ ಹಟ್ಟಿ ಭೇಟಿ



**ಚಿತ್ರದುರ್ಗ** : ಕಲುಷಿತ ನೀರು ಪ್ರಕರಣ–ಕ್ಕೆ ಸಂಬಂಧಿಸಿದಂತೆ ಕರ್ನಾಟಕ ಲೋಕಾಯುಕ್ತರಾದ ನ್ಯಾಯಮೂರ್ತಿ ಬಿ.ಎಸ್. ಪಾಟೀಲ್ ಅವರು ಶುಕ್ರವಾರ ಕವಾಡಿಗರ ಹಟ್ಟಿಗೆ ಭೇಟಿ ನೀಡಿ ಇಲ್ಲಿನ ವಿವಿಧ ಮನೆಗಳಿಗೆ ತೆರಳಿ, ಪರಿಸ್ಥಿತಿಯ ಬಗ್ಗೆ ವಿಚಾರಿಸಿದರು, ವೈಯಕ್ತಿಕ ಸ್ವಚ್ಛತೆಯನ್ನು ಕಾಪಾಡಿಕೊಳ್ಳಿ ಹಾಗೂ ಶೌಚಾಲಯಗಳನ್ನು ಬಳಸುವಂತೆ ಮನವಿ ಮಾಡಿದರು.

ಕವಾಡಿಗರ ಹಟ್ಟಿಗೆ ನೀರು ಪೂರೈಸಲಾಗುವ ಓವರ್ ಹೆಡ್ ಟ್ಯಾಂಕ್ ಬಳಿ ತೆರಳಿ ಪರಿಶೀಲನೆ ನಡೆಸಿದ ಲೋಕಾಯುಕ್ತರು,

ಕಲುಷಿತ ನೀರು ಸೇವನೆಯಿಂದ ಮೃತಪಟ್ಟ ಮಹಿಳೆಯ ಮನೆಗೆ ಭೇಟಿ ನೀಡಿದ ಲೋಕಾಯುಕ್ತರು, ಕುಟುಂಬಸ್ಥರಿಗೆ ಸಾಂತ್ವನದ ಮಾತುಗಳನ್ನಾಡಿದರು, ಅಲ್ಲದೆ ಪರಿಹಾರ ಮೊತ್ತ ಸ್ವೀಕರಿಸಿದ ಬಗ್ಗೆ ಮಾಹಿತಿ ಪಡೆದುಕೊಂಡರು. ಮನೆಯ ಸ್ಥಿತಿ, ಅನೈರ್ಮಲ್ಯದ ಪರಿಸರ ಕಂಡು, ಶೌಚಾಲಯ ಇಲ್ಲವೇ, ಶೌಚಾಲಯ ಕಟ್ಟಿಸಿಕೊಳ್ಳಲು ಸ್ಥಳ ಇದೆ ತಾನೆ ಎಂದು ಪ್ರಶ್ನಿಸಿದರು. ಇದಕ್ಕೆ, ಜಾಗ ಇದೆ, ಆದರೆ ಶೌಚಾಲಯ ಇಲ್ಲ, ಬಯಲಿಗೆ ಅಥವಾ ರಸ್ತೆ ಬದಿಗೆ ಶೌಚಕ್ಕೆ ತೆರಳುವುದಾಗಿ ಹೇಳಿದರು. ಸರ್ಕಾರದ ಯೋಜನೆಯಡಿ ಈ ಕುಟುಂಬಕ್ಕೆ ಶೌಚಾಲಯ ನಿರ್ಮಿಸಿಕೊಡಲು ಕೂಡಲೆ ಕ್ರಮ ವಹಿಸುವಂತೆ ಲೋಕಾಯುಕ್ತರು ಪೌರಾಯುಕ್ತರು ಸೂಚನೆ ನೀಡಿದರು.

**ವೈದ್ಯರ ಕಾರ್ಯಕ್ಕೆ ಮೆಚ್ಚುಗೆ** : ದಿನದ 24 ಗಂಟೆಯೂ ಚಿಕಿತ್ಸಾ ಕೇಂದ್ರ ಕಾರ್ಯ ನಿರ್ವಹಿಸುತ್ತಿದೆ. ಅಸ್ವಸ್ಥರನ್ನು ಪರೀಕ್ಷಿಸಿ, ಹೆಚ್ಚಿನ ಚಿಕಿತ್ಸೆ ಅಗತ್ಯವಿದ್ದರೆ, ನಗರದ ಜಿಲ್ಲಾ ಆಸ್ಪತ್ರೆ ಅಥವಾ ಖಾಸಗಿ ಆಸ್ಪತ್ರೆಗೆ ಕಳುಹಿಸಿಕೊಡಲಾಗುತ್ತಿದೆ, ಆಶಾ ಕಾರ್ಯಕತೆ–ಯರು ಮನೆ ಮನೆಗೆ ತೆರಳಿ, ಸಾರ್ವಜನಿಕರ ಆರೋಗ್ಯ ಸ್ಥಿತಿಗತಿಗಳ ಕುರಿತು ಮಾಹಿತಿ ಪಡೆದು, ಸೂಕ್ತ ಸಲಹೆ ಸೂಚನೆಗಳನ್ನು ನೀಡುತ್ತಿದ್ದಾರೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ರಂಗನಾಥ್ ಅವರು ಲೋಕಾಯುಕ್ತರಿಗೆ ಮಾಹಿತಿ ನೀಡಿದರು.

**ಲೋಕಾಯುಕ್ತರಿಂದ ನಗರ ಸಂಚಾರ** : ಚಿತ್ರದುರ್ಗ ನಗರದಲ್ಲಿನ ತ್ಯಾಜ್ಯ ವಿಲೇವಾರಿ ನಿರ್ವಹಣೆ ಹಾಗೂ ಸ್ವಚ್ಛತೆ ಕುರಿತಂತೆ ಪರಿಶೀಲಿಸಲು ಲೋಕಾಯುಕ್ತರಾದ ನ್ಯಾ. ಬಿ.ಎಸ್. ಪಾಟೀಲ್ ಅವರು ಬೆಳ್ಳಂಬೆಳಿಗ್ಗೆಯೇ ನಗರ ಸಂಚಾರ ಕೈಗೊಂಡರು. ನಗರದ ಹೊಳಲ್ಕೆರೆ ರಸ್ತೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು, ಬಳಿಕ ಮೆದೆಹಳ್ಳಿ ರಸ್ತೆ, ಖಾಸಗಿ ಬಸ್ ನಿಲ್ದಾಣ, ಸಂತೆಹೊಂಡ ರಸ್ತೆ, ಬಸವೇಶ್ವರ ಟಾಕೀಸ್ ರಸ್ತೆಗೆ ಭೇಟಿ ನೀಡಿದರು, ಬಸವೇಶ್ವರ ಟಾಕೀಸ್ ರಸ್ತೆಯ ಗುರುವೈಭವ ಬಳಿಯ ಖಾಲಿ ನಿವೇಶನದಲ್ಲಿ ಕಸ ಹಾಗೂ ಹಸಿ ತ್ಯಾಜ್ಯದ ಸಂಗ್ರಹದ ರಾಶಿ ಬಿದ್ದಿರುವುದನ್ನು ಕಂಡ ಲೋಕಾಯುಕ್ತರು, ನಗರಸಭೆ ಪೌರಾಯುಕ್ತರು ಹಾಗೂ ಆರೋಗ್ಯ ನಿರೀಕ್ಷಕರ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಖಾಲಿ ನಿವೇಶನಗಳು ಕಸ ತುಂಬುವ ತೊಟ್ಟಿಗಳಲ್ಲ. ಕಸದ ರಾಶಿ ಸಂಗ್ರಹಕ್ಕೆ ಕಾರಣವಾಗುತ್ತಿರುವ ಖಾಸಗಿ ನಿವೇಶನಗಳ ಮಾಲೀಕರ ವಿರುದ್ಧ ಕಠಿಣ ಕ್ರಮ ಜರುಗಿಸಬೇಕು, ಅವರಿಗೆ ಸ್ವಚ್ಛಗೊಳಿಸಲು ಸೂಚಿಸಬ 'ೇಕು,ಸ್ವಚ್ಛಗೊಳಿಸದಿದ್ದಲ್ಲಿ, ದಂಡ ಹಾಕಿ, 03 ದಿನಗಳ ಒಳಗಾಗಿ ಎಲ್ಲವೂ ಸ್ವಚ್ಛವಾಗಬೇಕು, ಅಲ್ಲದೆ ಪ್ರತಿನಿತ್ಯವೂ ಸ್ವಚ್ಛವಾಗಿಸಬೇಕು ಎಂದು ಸೂಚನೆ ನೀಡಿದರು. ಈ ಬಗ್ಗೆ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು 03 ದಿನಗಳ ಬಳಿಕ ಪರಿಶೀಲಿಸಿ, ವರದಿ ಸಲ್ಲಿಸುವಂತೆ ತಿಳಿಸಿದರು. ಬಳಿಕ ನಗರದ ಕೆಳಗೋಟೆ, ಗೋಪಾಲಪುರ ರಸ್ತೆ, ಎನ್‌ಹೆಚ್ 04 ಸರ್ವೀಸ್ ರಸ್ತೆ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲಿಸಿದರು.

ಲೋಕಾಯುಕ್ತ ಪೊಲೀಷ್ ಅಧೀಕ್ಷಕ ವಾಸುದೇವರಾಮ್, ಡಿವೈಎಸ್‌ಪಿ ಮೃತ್ಯುಂಜಯ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ರಂಗನಾಥ್, ಪೌರಾಯುಕ್ತ ಶ್ರೀನಿವಾಸ್ ಮುಂತಾದವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಫಾಸ್ಟ್ ನ್ಯೂಸ್

# ಓದಿದ ಶಾಲೆಗೆ ಶೈಕ್ಷಣಿಕ ಉಪಕರಣಗಳ ಕೊಡುಗೆ



**ದಾವಣಗೆರೆ :** ವಿದ್ಯೆ ಕಲಿತ ಶಾಲೆಯನ್ನಾಗಲೀ, ಜ್ಞಾನ ಧಾರೆ ಎರೆದ ಗುರುವನ್ನಾಲೀ ಎಂದಿಗೂ ಮರೆಯದೇ ಉನ್ನತ ಸ್ಥಾನ ಕಂಡರೂ ಶಾಲೆಗೆ ತಮ್ಮದೇ ಕೊಡುಗೆ ನೀಡುವವರು ವಿರಳ. ಆದರೆ, ಕುಂದಾಪುರದ ಮೆಸ್ಕಾಂ ಸಹಾಯಕ ಇಂಜಿನಿಯರ್ ಆಗಿರುವ ಸುರೇಶ್ ಬಾಬು ಅವರು ತಾವು ವಿದ್ಯೆ ಕಲಿತ ಹೊಸ ಕುಂದುವಾಡದ ಉನ್ನತೀಕರಿಸಿದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಇಂದು ತಮ್ಮ ಅಚ್ಚು ಮೆಚ್ಚಿನ ಅಜ್ಜಿ ಹನುಮಕ್ಕ ಅವರ ಸ್ವರ್ಣಾರ್ಥವಾಗಿ ನಾವು-ನೀವು ಕಾರ್ಯಕ್ರಮದಡಿ 19 ಸಾವಿರ ರೂ. ಮೌಲ್ಯದ 5 ಟೇಬಲ್ ಗಳು ಮತ್ತು 35 ನಲಿ-ಕಲಿಗೆ ಚೇರುಗಳನ್ನು ಕೊಡುಗೆಯಾಗಿ ನೀಡುವ ಮೂಲಕ ಮಾದರಿಯಾಗಿದ್ದಾರೆ. ಅಲ್ಲದೇ ಪ್ರಶಂಸೆಗೆ ಪಾತ್ರರಾಗಿದ್ದಾರೆ.

ಈ ವೇಳೆ ಸನ್ಮಾನ ಸ್ವೀಕರಿಸಿ ಮಾತನಾಡಿದ ಸುರೇಶ್ ಬಾಬು, ಮಕ್ಕಳು ಉತ್ತಮ ಅಭ್ಯಾಸದ ಕಡೆಗೆ ಗಮನಹರಿಸಿ ಊರಿಗೆ, ಶಾಲೆಗೆ, ಪೋಷಕರಿಗೆ, ಶಿಕ್ಷಕರಿಗೆ ಒಳ್ಳೆಯ ಹೆಸರು ಕೀರ್ತಿಯನ್ನು ತನ್ನಿ. ನಮ್ಮ ಊರಲ್ಲಿ ಸರ್ಕಾರಿ ಶಾಲೆಯಲ್ಲಿ ಓದಿ ಸರ್ಕಾರಿ ನೌಕರಿ ಹಾಗೂ ಉನ್ನತ ಸ್ಥಾನಗಳನ್ನು ಅಲಂಕರಿಸಿದವರು ಇದ್ದಾರೆ. ಖಾಸಗಿ ಶಾಲೆಯಲ್ಲಿ ಓದಿದವರು ಬೆರಳೆಣಿಕೆಯಷ್ಟು ಜನರು ಮಾತ್ರ ಸರ್ಕಾರಿ ಉದ್ಯೋಗವನ್ನು ಗಿಟ್ಟಿಸಿಕೊಂಡಿದ್ದಾರೆ ಹಾಗಾಗಿ ಸರ್ಕಾರಿ ಶಾಲೆ ಎಂಬ ತತ್ಸರ ಮನೋಭಾವನೆಯನ್ನು ಕಿತ್ತು ಹಾಕಿ ಎಂದು ತಿಳಿಸಿದರು.

ಸರ್ಕಾರಿ ಶಾಲೆಯಲ್ಲಿ ಅಭ್ಯಾಸ ಮಾಡಿ ಉನ್ನತ ಸ್ಥಾನವನ್ನು ಪಡೆಯಬಹುದೆಂದು ಮನೋಭಾವನೆಯನ್ನು ಬೆಳೆಸಿಕೊಳ್ಳಿ. ಶಾಲೆಯಲ್ಲಿ ಉತ್ತಮ ಶಿಕ್ಷಕರು ಇದ್ದಾರೆ. ಅವರು ಹೇಳುವಂತಹ ಪಾಠ ಪ್ರವಚನಗಳನ್ನು ಸರಿಯಾಗಿ ಆಲಿಸಿ ವಿದ್ಯಾಭ್ಯಾಸದ ಕಡೆಗೆ ಹೆಚ್ಚು ಗಮನಹರಿಸಿ ಎಂದು ಮಕ್ಕಳಿಗೆ ಕಿವಿಮಾತು ಹೇಳಿದರು. ಮುಂದಿನ ದಿನಗಳಲ್ಲಿ ನಮ್ಮ ಸಂಘಟಿತ ಗೆಳೆಯರ ಬಳಗದಿಂದ ಶಾಲೆ ಮಕ್ಕಳಿಗೆ ಕುಂದು ಕೊರತೆಗಳು ಇದ್ದಂತಹ ಸಂದರ್ಭದಲ್ಲಿ ಅವುಗಳನ್ನು ಬಗೆಹರಿಸುವುದಕ್ಕಾಗಿ ನಾವು ಯಾವಾಗಲೂ ಸಿದ್ಧರಿದ್ದೇವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮುಖ್ಯ ಶಿಕ್ಷಕರಾದ ಕೆ ಸಿದ್ದಪ್ಪ, ಶಿಕ್ಷಕರಾದ ಮೋಹನ್ ಕುಮಾರ್, ಮಲ್ಲಿಕಾರ್ಜುನಪ್ಪ, ಚಂದ್ರಾಕ್ಷಿ, ಲತಾ, ನಿಂಗಮ್ಮ, ಮಂಜುಳಾ ಪಾಟೀಲ್, ಸವಿತಾ ಬಾನು,ಹಾಗೂ ಗ್ರಾಮಸ್ಥರಾದ ಸೋಮಶೇಖರ್, ಪತ್ರಕರ್ತರಾದ ಅಣ್ಣಪ್ಪ ಬಿ. ಕುಂದುವಾಡ, ರಾಘವೇಂದ್ರ ಇದ್ದರು.

# ತರಕಾರಿ ಖರೀದಿಸಿದ ಸಾರ್ವಜನಿಕರು



**ಚಳ್ಳಕೆರೆ :** ನಗರದ ಎಸ್ಆರ್ಎಸ್ ವಿದ್ಯಾಸಂಸ್ಥೆಯ ವಿದ್ಯಾರ್ಥಿಗಳು ಅಂಬೇಡ್ಕರ್ ಮತ್ತು ಬಸವೇಶ್ವರ ವೃತ್ತದಲ್ಲಿ ಸಂತೆ ನಡೆಸುವ ಮೂಲಕ ಸಾರ್ವಜನಿಕರ ಗಮನಸೆಳೆದರು. ಪ್ರಾಚಾರ್ಯ ಬಿ.ಎಸ್.ವಿಜಯ ಈ ಬಗ್ಗೆ ಮಾಹಿತಿ ನೀಡಿ, ಪ್ರತಿವರ್ಷ ಕಡೆ ಪಕ್ಷ ಎರಡು ಬಾರಿಯಾದರೂ ವಿದ್ಯಾರ್ಥಿಗಳ ಹಂತದಲ್ಲಿ ಸಂತೆಯನ್ನು ಆಯೋಜಿಸುವ ಮೂಲಕ ಅವರಿಗೆ ವಿವಿಧ ತರಕಾರಿ, ಬೆಳೆಯುವ ವಿಧಾನ, ಮಾರಾಟ ಮಾಡುವ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. ಈ ಸಂದರ್ಭದಲ್ಲಿ ಎಲ್ಲಾ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡು ತಮ್ಮ ವ್ಯವಹಾರಿಕ ಜ್ಞಾನವನ್ನು ಹೆಚ್ಚಿಸಿಕೊಳ್ಳಲು ಸಹಕಾರಿಯಾಗುತ್ತಿದೆ. ವಿಶೇಷವಾಗಿ ಪೋಷಕರು ಹಾಗೂ ಸಾರ್ವಜನಿಕರು ಮಕ್ಕಳ ಸಂತೆಯಲ್ಲಿ ವಿಶೇಷ ಆಸಕ್ತಿ, ಪ್ರೀತಿ ವಿಶ್ವಾಸದಿಂದ ಆಗಮಿಸಿ ಖರೀದಿಸುತ್ತಿದ್ದಾರೆ. ಇದರಿಂದ ಮಕ್ಕಳ ವ್ಯವಹಾರ ಜ್ಞಾನ ಉತ್ತಮಗೊಳ್ಳಲು ಸಹಕಾರಿಯಾಗಲಿದೆ ಎಂದರು. ಈ ಸಂದರ್ಭದಲ್ಲಿ ಸಹನಾ, ರಂಜಿನಿ, ನಯಾಜ್, ಅರುಣ್ ಮುಂತಾದವರು ಭಾಗವಹಿಸಿದ್ದರು.

# ನೇರ್ಲಹಳ್ಳಿ ಗ್ರಾ.ಪಂ. ಅಧ್ಯಕ್ಷ, ಉಪಾಧ್ಯಕ್ಷರ ಅವಿರೋಧವಾಗಿ ಆಯ್ಕೆ



**ಮೊಳಕಾಲ್ಮುರು :** ತಾಲೂಕಿನ ನೇರ ಹಳ್ಳಿ ಗ್ರಾಮ ಪಂಚಾಯಿತಿಯ ಎರಡನೇ ಅವಧಿಗೆ ಗುರುವಾರ ನಡೆದ ಅಧ್ಯಕ್ಷ ಉಪಾಧ್ಯಕ್ಷ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಪಾಪಣ್ಣ ಉಪಾಧ್ಯಕ್ಷರಾಗಿ ಮಂಜುಳಾ ಅವಿರೋಧವಾಗಿ ಆಯ್ಕೆಯಾಗಿರುವುದಾಗಿ ಚುನಾವಣಾಧಿಕಾರಿ ಪ್ರಕಟಿಸಿದರು

13 ಸದಸ್ಯರ ಬಲ ಉಳ್ಳ ಈ ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನವು ಎಸ್ ಟಿ. ಉಪಾಧ್ಯಕ್ಷ ಸ್ಥಾನವು ಸಾಮಾನ್ಯ ವರ್ಗ (ಮಹಿಳೆ)ಗೆ ಮೀಸಲಿತ್ತು. ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳಿಗೆ ತಲಾ ಒಬ್ಬರು ಮಾತ್ರ ನಾಮಪತ್ರ ಸಲ್ಲಿಸಿದ ಕಾರಣ ಇವರಿಬ್ಬರನ್ನು ಅವಿರೋಧವಾಗಿ ಆಯ್ಕೆ ಮಾಡಿರುವುದಾಗಿ ಚುನಾವಣಾಧಿಕಾರಿ ಘೋಷಿಸಿದರು

ಚುನಾವಣೆ ಅಧಿಕಾರಿಯಾಗಿ ಎಂ ಹನುಮಂತಪ್ಪ ಸಹಾಯಕರಾಗಿ ಸಿರಿಸ್ದಾರ್ ಅಂಜಿನಪ್ಪ ನಂದೀಶ್ ಪ್ರವೀಣ್ ಕರ್ತವ್ಯ ನಿರ್ವಹಿಸಿದರು

ಸಂದರ್ಭದಲ್ಲಿ ಪಿಡಿಒ ಕೆ ಅಬ್ದುಲ್ ಮಾಲಿಕ್, ಸದಸ್ಯರಾದ ರತ್ನಮ್ಮ ಬಂಗಿ ಸೂರಯ್ಯ ಗಂಗ-ರೆಡ್ಡಿ ಪಿ.ಪಾಲಯ ಎಸ್ . ಓಬ ನಾಯಕ, ಮಮತಾ ರತ್ನಮ್ಮ ಕಾರ್ಯದರ್ಶಿ ಕೊಲ್ಲಣ್ಣ ಉಪಸ್ಥಿತರಿದ್ದರು

ಮೊಳಕಾಲ್ಮುರು ತಾಲ್ಲೂಕಿನ ನೇರ್ಲಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಅವಿರೋದವಾಗಿ ಆಯ್ಕೆಯಾದ ಅಧ್ಯಕ್ಷ ಮತ್ತು ಉಪಾಧ್ಯಕ್ಷರಿಗೆ ಸನ್ಮಾನಿಸಲಾಯಿತು

# ಕೊಂಡ್ಲಹಳ್ಳಿ ಗ್ರಾ.ಪಂ. ಅಧ್ಯಕ್ಷ, ಉಪಾಧ್ಯಕ್ಷರ ಅವಿರೋಧವಾಗಿ ಆಯ್ಕೆ



**ಮೊಳಕಾಲ್ಮುರು :** ಮೊಳಕಾಲ್ಮುರು ತಾಲೂಕಿನ ಕೊಂಡ್ಲಹಳ್ಳಿ ಗ್ರಾಮ ಪಂಚಾಯಿತಿಯ ಎರಡನೇ ಅವಧಿಗೆ ಗುರುವಾರ ನಡೆದ ಅಧ್ಯಕ್ಷ ಉಪಾಧ್ಯಕ್ಷ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಎಂ.ಎಲ್. ಪವಿತ್ರ ಉಪಾಧ್ಯಕ್ಷರಾಗಿ ಎಂ ತಿಪ್ಪೇಸ್ವಾಮಿ ಆಯ್ಕೆಯಾಗಿರುವುದಾಗಿ ಚುನಾವಣಾಧಿಕಾರಿ ಪ್ರಕಟಿಸಿದರು

24 ಸದಸ್ಯರ ಉಳ್ಳ ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನವು ಸಾಮಾನ್ಯ ಮಹಿಳೆ ಉಪಾಧ್ಯಕ್ಷ ಸ್ಥಾನವು ಎಸ್ ಸಿ ಕೆಟಗರಿಗೆ ಮೀಸಲಾಗಿತ್ತು. ಅಧ್ಯಕ್ಷ ಸ್ಥಾನಕ್ಕೆ ಎಂ ಎಲ್ ಪವಿತ್ರ ಹಾಗೂ ಮಂಜಮ್ಮ ಅರ್ಜಿ ಸಲ್ಲಿಸಿದ್ದ ಕಾರಣ ಚುನಾವಣೆ ನಡೆಯಿತು. ಪವಿತ್ರಾಗೆ14 ಮಂಜಮ್ಮ ಗೆ 10 ಮತಗಳು ಬಂದಿದ್ದ ಕಾರಣ ಪವಿತ್ರರನ್ನು ಅಧ್ಯಕ್ಷೆಯೆಂದು ಘೋಷಿಸಲಾಯಿತು..

ಉಪಾಧ್ಯಕ್ಷ ಸ್ಥಾನಕ್ಕೆ ಎಂ ತಿಪ್ಪೇಸ್ವಾಮಿ ಹಾಗೂ ಎಸ್ ಕುಬೇರ ಸ್ಪರ್ಧಿಸಿದ್ದು ಮತದಾನದಲ್ಲಿ ಇಬ್ಬರಿಗೂ 12 ಮತ ಬಿದ್ದಿದ್ದ ಕಾರಣ ಲಾಟರಿ ಮೂಲಕ ವಿಜೇತರನ್ನು ಆಯ್ಕೆ ಮಾಡಲಾಯಿತು ಲಾಟರಿ ಪ್ರಕ್ರಿಯೆಯಲ್ಲಿ ಎಂ ತಿಪ್ಪೇಸ್ವಾಮಿ ಉಪಾಧ್ಯಕ್ಷರಾಗಿ ಆಯ್ಕೆಯಾಗಿರುವುದಾಗಿ ಚುನಾವಣಾಧಿಕಾರಿ ಪ್ರಕಟಿಸಿದರು

ಚುನಾವಣೆ ಅಧಿಕಾರಿಯಾಗಿ ತಾಲೂಕು ಪಂಚಾಯಿತಿ ಪ್ರಭಾರಿ ಇ ಓ ಗಣೇಶ್, ಸಹಾಯಕರಾಗಿ ತಾಲೂಕು ಪಂಚಾಯಿತಿ ವ್ಯವಸ್ಥಾಪಕ ನಂದೀಶ್, ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಚುನಾವಣೆಯ ಆಯ್ಕೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದರು

ಸಂದರ್ಭದಲ್ಲಿ ಪಿ ಡಿ ಓ ಮಲ್ಲಿಕಾರ್ಜುನ, ಕಾರ್ಯದರ್ಶಿ ಕವಿತಾ, ಸದಸ್ಯರಾದ ಅರಾಧಮ್ಮ ಪಿ ಶಾಂತಮ್ಮ ಪಿ ಕರೆ ಗೌಡ ಜಿಎಸ್ ಸುಮಾ ಯಶೋದಮ್ಮ ಬಿ ಚಂದ್ರಶೇಖರ್ ಗಂಗಮ್ಮ ಭೀತಿ ಹನುಮಂತರ ಜಿ ಲಕ್ಷ್ಮಿ ಮಮತಾ ಪಾಲಾಕ್ಷಿ ಜಿಕೆ ಪದ್ಮಾವತಿ ಆರ್ ಶ್ರುತಿ ಎಸ್ ಕೆ ನಿಂಗರಾಜ್ ಹಿಮಾ ಮುಸೇನ್ ಮಲ್ಲಿಕಮ್ಮ ಎಸ್ ಪಿ ಮಂಜಣ್ಣ ರತ್ನಮ್ಮ ಎಸ್ ಬಿ ಕರಿಬಸಣ್ಣ ಹಾಗೂ ಗ್ರಾಮ ಪಂಚಾಯಿತಿ ಸಿಬ್ಬಂದಿ ಮತ್ತು ಪೊಲೀಸ್ ಸಿಬ್ಬಂದಿ ಉಪಸ್ಥಿತರಿದ್ದರು.

# ವೃತ್ತ ನೌಕರರ ಸಂಘದ ಪ್ರಥಮ ಸಭೆ



ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘದ ಜಿಲ್ಲಾ ಕಚೇರಿಯಲ್ಲಿ ಪದಾಧಿಕಾರಿಗಳ ಪ್ರಥಮ ಸಭೆ

**ಚಿತ್ರದುರ್ಗ :** ಪಿಳ್ಳೆಕೆರನಹಳ್ಳಿ ರಸ್ತೆ, ಕನಕ ನಗರದಲ್ಲಿರುವ ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘದ ಕಚೇರಿಯಲ್ಲಿ 2023-2026 ನೇ ಅವಧಿಯ ಪದಾಧಿಕಾರಿಗಳ ಪ್ರಥಮ ಸಭೆ ನಡೆಯಿತು.

ಅಧ್ಯಕ್ಷ ಆರ್.ರಂಗಪ್ಪರೆಡ್ಡಿ, ಉಪಾಧ್ಯಕ್ಷರುಗಳಾದ ಎಂ.ಶಿವಾನಂದಪ್ಪ, ಬಿ.ಪಿ. ಪ್ರೇಮನಾಥ್, ಪ್ರಧಾನ ಕಾರ್ಯದರ್ಶಿ ಎಂ.ರಂಗಪ್ಪ, ಸಹ ಕಾರ್ಯದರ್ಶಿ ಕೆ.ಎಸ್.ಜಯಣ್ಣ, ಖಜಾಂಚಿ ಎನ್. ಆರ್.ಬೈಯಣ್ಣ, ಸಂಘಟನಾ ಕಾರ್ಯದರ್ಶಿ ಟಿ.ಆರ್.ಮಂಜುನಾಥ್, ಸಾಂಸ್ಕೃತಿಕ ಕಾರ್ಯದರ್ಶಿ ಎಫ್.ಆರ್. ಹಾಲಗೇರಿ, ಕ್ರೀಡಾ ಕಾರ್ಯದರ್ಶಿ ಪಿ.ನಾಗರಾಜ್, ಲೆಕ್ಕಪರಿಶೋಧಕ ಡಿ.ಟಿ.ನಾಗರಾಜ್, ಕುಂದುಕೊರತೆ ವಿಭಾಗ ಹಾಗೂ ಸಮನ್ವಯ ಅಧ್ಯಕ್ಷ ನಾಗರಾಜ್ ಸಂಗಂ ಮತ್ತು ನಿರ್ದೇಶಕರುಗಳು ಸಭೆಯಲ್ಲಿ ಭಾಗವಹಿಸಿ ನಿವೃತ್ತ ನೌಕರರ ಸಮಸ್ಯೆಗಳ ಕುರಿತು ಚರ್ಚಿಸಿದರು.

# ತಮ್ಮನಹಳ್ಳಿ ಗ್ರಾ.ಪಂ. ಅಧ್ಯಕ್ಷ, ಉಪಾಧ್ಯಕ್ಷರ ಅವಿರೋಧವಾಗಿ ಆಯ್ಕೆ



**ಮೊಳಕಾಲ್ಮುರು :** ತಾಲೂಕಿನ ತಮ್ಮನಹಳ್ಳಿ ಗ್ರಾಮ ಪಂಚಾಯಿತಿಯ ಎರಡನೇ ಅವಧಿಗೆ ಗುರುವಾರ ನಡೆದ ಅಧ್ಯಕ್ಷ ಉಪಾಧ್ಯಕ್ಷ ಚುನಾವಣೆಯಲ್ಲಿ ಅಧ್ಯಕ್ಷರಾಗಿ ನಾಗಮ್ಮ ಉಪಾಧ್ಯಕ್ಷರಾಗಿ ಕೆಎಂ ತಿಪ್ಪೇಸ್ವಾಮಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

26 ಸದಸ್ಯರ ಬಲಉಳ್ಳ ಈ ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನವು ಎಸ್ ಟಿ ಮಹಿಳೆ ಉಪಾಧ್ಯಕ್ಷ ಸ್ಥಾನವು ಎಸ್ ಟಿ ವರ್ಗಕ್ಕೆ ಮೀಸಲಿತ್ತು. ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳಿಗೆ ತಲಾ ಒಬ್ಬರು ಮಾತ್ರ ನಾಮಪತ್ರ ಸಲ್ಲಿಸಿದ್ದ ಕಾರಣ ಇವರಿಬ್ಬರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು..

ಚುನಾವಣೆ ಅಧಿಕಾರಿಯಾಗಿ ಪ್ರಭಾರಿ ಬಿ ಇ ಓ. ಕೆ ತಿಪ್ಪೇಸ್ವಾಮಿ. ಸಹಾಯಕರಾಗಿ ಪ್ರಭಾರಿ ಸಿರಿಸ್ದಾರ್ ಶ್ರೀಧರ್, ಕರ್ತವ್ಯ ನಿರ್ವಹಿಸಿದರು .

ಸಂದರ್ಭದಲ್ಲಿ ಪಿ ಡಿ ಓ ಗುಡ್ಡಪ್ಪ ಕಾರ್ಯದರ್ಶಿ ಗಂಗಣ್ಣ, ಸದಸ್ಯರಾದ ಚಿದಾನಂದಪ್ಪ ಸಣ್ಣ ಮಾರಣ್ಣ ಡಿಎಲ್ ಗುರುಲಿಂಗಪ್ಪ ಪಿ ಟಿ ಶಿವರುದ್ರಪ್ಪ ಸಿದ್ದನಾಯಕ ಹೊನ್ನೂರ ಸ್ವಾಮಿ ವೀರಣ್ಣ ಈಶ್ವರಪ್ಪ ರಾಮಣ್ಣ ವಸಂತಪ್ಪ ಮಾರೇಶ್ ಸಣ್ಣಪ್ಪ ಹೊನ್ನೂರ ಚೆನ್ನಯ್ಯ ಮೃತ್ಯುಂಜಯ ವೆಂಕಟೇಶ್ ಭೀಮಣ್ಣ ಚಂದ್ರಶೇಖರ್ ಅಮರೇಶ್ ಮುಖಂಡರಾದ ಹನುಮಂತ ಉಪ್ಪಾರ ಇನ್ನು ಹಲವರಿದ್ದರು.

# ತಾತ್ಕಾಲಿಕ ಸ್ಥಗಿತ

**ಚಳ್ಳಕೆರೆ :** ಬೆಸ್ಕಾಂ ಉಪವಿಭಾಗ ವ್ಯಾಪ್ತಿಯ ಎಂಯುಎಸ್ಎಸ್ ಕೇಂದ್ರದಲ್ಲಿ ಎರಡನೇ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಪ್ರಯುಕ್ತ ಆ.12ರ ಶನಿವಾರ ಬೆಳಗ್ಗೆ 10ರಿಂದ ಮಧ್ಯಾಹ್ನ 3ರ ತನಕ ವಿದ್ಯುತ್ ಸರಬರಾಜನ್ನು ಸ್ಥಗಿತಗೊಳಿಸಲಾಗುವುದು ಎಂದು ಎಇಇ ರಾಜು ತಿಳಿಸಿದ್ದಾರೆ. ಚಳ್ಳಕೆರೆ ನಗರ ವ್ಯಾಪ್ತಿಯ ಪ್ರದೇಶಗಳಾದ ಬೆಂಗಳೂರು, ಬಳ್ಳಾರಿ, ಪಾವಗಡ ರಸ್ತೆ, ಬುಡ್ನಹಟ್ಟಿ, ನಗರಂಗೆರೆ ಮತ್ತು ನನ್ನಿವಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿದ್ಯುತ್ ಸರಬರಾಜು ಇರುವುದಿಲ್ಲ.

# ಲಕ್ಕಿಹಳ್ಳಿ ಗ್ರಾ.ಪಂ ಅಧ್ಯಕ್ಷರಾಗಿ ಲಕ್ಷ್ಮಿದೇವಿ ಮುದ್ದಪ್ಪ ಆಯ್ಕೆ



**ಹೊಸದುರ್ಗ :** ತಾಲೂಕಿನ ಮಾಡದಕೆರೆ ಹೋಬಳಿಯ ಲಕ್ಕಿಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ 2ನೇ ಅವಧಿಗೆ ಬುಧವಾರ ನಡೆದ ಚುನಾವಣಾ ಪ್ರಕ್ರಿಯೆಯಲ್ಲಿ ಅಧ್ಯಕ್ಷರಾಗಿ ಲಕ್ಷ್ಮಿದೇವಿ ಮುದ್ದಪ್ಪ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಗ್ರಾಮ ಪಂಚಾಯಿತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ 2 ಅವಧಿಗೆ ಪ್ರಕಟವಾದ ಮೀಸಲಾತಿ ಪಟ್ಟಿಯಲ್ಲಿ ಲಕ್ಕಿಹಳ್ಳಿ ಗ್ರಾ.ಪಂ ಅಧ್ಯಕ್ಷ ಸ್ಥಾನ ಪರಿಶಿಷ್ಟ ಜಾತಿ ಮಹಿಳೆ, ಉಪಾಧ್ಯಕ್ಷ ಸ್ಥಾನ ಬಿಸಿಎಂ-ಎಗೆ ಮೀಸಲಾಗಿತ್ತು. ಅಧ್ಯಕ್ಷ ಸ್ಥಾನಕ್ಕೆ ಲಕ್ಷ್ಮಿ ದೇವಿ ಮುದ್ದಪ್ಪ, ಉಪಾಧ್ಯಕ್ಷ ಸ್ಥಾನಕ್ಕೆ ತಿಮ್ಮಪ್ಪ ನಾಮಪತ್ರ ಸಲ್ಲಿಸಿದ್ದರು. ಗ್ರಾ.ಪಂ 18 ಜನ ಸದಸ್ಯರಿದ್ದು, ಇವರಿಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಅಧ್ಯಕ್ಷ ಸ್ಥಾನಕ್ಕೆ ಲಕ್ಷ್ಮೀದೇವಿ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ತಿಮ್ಮಪ್ಪ ಇವರುಗಳನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ತಹಸಿಲ್ದಾರ್ ಪ್ರಕಟಣೆ-ಯ ಮೂಲಕ ತಿಳಿಸಿದ್ದಾರೆ.

ಚುನಾವಣಾ ಪ್ರಕ್ರಿಯೆ ಮುಗಿದ ಬಳಿಕ ನೂತನ ಅಧ್ಯಕ್ಷೆ ಲಕ್ಷ್ಮಿ ದೇವಿ ಮಾತನಾಡಿ, ಪರಿಶಿಷ್ಟ ಜಾತಿಯ ಬಡ ಕುಟುಂಬದಲ್ಲಿ ಜನಿಸಿದ ನನಗೆ ಇಂತಹ ಸ್ಥಾನ ಸಿಗುತ್ತದೆ ಎಂದು ಯಾವತ್ತೂ ಯೋಚಿಸಿರಲಿಲ್ಲ. ನಿರಂತರವಾಗಿ ಗ್ರಾಮದ ಜನರೊಂದಿಗೆ ಇಟ್ಟುಕೊಂಡಿ-ದ್ದ ಸ್ನೇಹ, ವಿಶ್ವಾಸ, ಬಾಂಧವ್ಯದಿಂದಾಗಿ ಸದಸ್ಯೆ, ಉಪಾಧ್ಯಕ್ಷೆ ಮತ್ತು ಅಧ್ಯಕ್ಷೆಯಾಗಿ ಜನರ ಸೇವೆ ಮಾಡುವಂತಹ ಭಾಗ್ಯ ದೊ-ರೆತಿದೆ. ಪಂಚಾಯಿತಿ ಸದಸ್ಯರುಗಳೊಂದಿಗೆ ಮತ್ತು ಪಂಚಾಯಿತಿ ವ್ಯಾಪ್ತಿಗೆ ಒಳಪಡುವ ಎಲ್ಲಾ ಗ್ರಾಮಗಳ ಜನರ ಸಲಹೆ ಪಡೆದು ಜನರ ಕಲ್ಯಾಣಕ್ಕಾಗಿ ನಿಸ್ವಾರ್ಥವಾಗಿ ಕೆಲಸ ಮಾಡುತ್ತೇನೆ ಎಂದು ಹೇಳಿದರು.


ಗೌರವಾನ್ವಿತ 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಚಿತ್ರದುರ್ಗ.
ಸಿ.ಆರ್.ಮಿಸ್.ಸಂಖ್ಯೆ: 724/2023

**ಅರ್ಜಿದಾರರು:**

1) ನಾರಾಯಣಪ್ಪ ಬಿನ್ ನಿಂಗಪ್ಪ, ವಯಸ್ಸು ಸುಮಾರು 73 ವರ್ಷ, ವೃತ್ತಿ: ವ್ಯವಸಾಯ, ವಾಸ: ಆಯಿತೋಳು ಗ್ರಾಮ, ಐಯ್ಯನಹಳ್ಳಿ ಅಂಚೆ, ಚಿತ್ರದುರ್ಗ ತಾಲ್ಲೂಕು. 2) ಯಶೋಧಮ್ಮ ಬಿನ್ ನಿಂಗಪ್ಪ ಕೋಂ ಲಕ್ಷ್ಮಣಪ್ಪ, ವಯಸ್ಸು ಸುಮಾರು 60 ವರ್ಷ. 3) ಸಿ. ಚಂದ್ರಪ್ಪ ಬಿನ್ ನಿಂಗಪ್ಪ, ವಯಸ್ಸು ಸುಮಾರು 58 ವರ್ಷ, ವಾಸ: ಕೆರೆಯಾಗಳಹಳ್ಳಿ ಗ್ರಾಮ, ಕಲ್ಯಾಣದುರ್ಗ ತಾಲ್ಲೂಕು, ಅನಂತಪುರ ಜಿಲ್ಲೆ. ಆಂದ್ರಪ್ರದೇಶ. 4) ತಿಮ್ಮಪ್ಪ ಬಿನ್ ನಿಂಗಪ್ಪ ಕೋಂ ರಾಮಪ್ಪ, ವಯಸ್ಸು ಸುಮಾರು 56 ವರ್ಷ. 2 ಮತ್ತು 4ನೇ ಅರ್ಜಿದಾರರ ವಾಸ: ಆಶೋಕ ನಗರ 2, ಈಶ್ವರ ದೇವಸ್ಥಾನ ಹತ್ತಿರ, ಯೆಡೆಹಳ್ಳಿ, ಶಿವಮೊಗ್ಗ ಜಿಲ್ಲೆ. 5) ಯಲ್ಲಮ್ಮ ಕೋಂ ಭೀಮಪ್ಪ, ವಯಸ್ಸು ಸುಮಾರು 68 ವರ್ಷ. 6) ವೆಂಕಟೇಶ ಬಿನ್ ಭೀಮಪ್ಪ, ವಯಸ್ಸು ಸುಮಾರು 53 ವರ್ಷ. 7) ಹನುಮಂತಪ್ಪ ಬಿನ್ ಭೀಮಪ್ಪ, ವಯಸ್ಸು ಸುಮಾರು 48 ವರ್ಷ. 5 ರಿಂದ 7ನೇ ಅರ್ಜಿದಾರರ ವಾಸ: ಗುಡ್ಡದರಂಗವ್ವನಹಳ್ಳಿ ಗ್ರಾಮ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆ.

**:ವಿರುದ್ಧ:**

ಎದುರುದಾರರು: ತಹಶೀಲ್ದಾರ್ / ಜನನ ಮತ್ತು ಮರಣ ನೋಂದಣಾಧಿಕಾರಿಗಳು, ತಾಲ್ಲೂಕು ಕಛೇರಿ, ಚಿತ್ರದುರ್ಗ.

**ಸಾರ್ವಜನಿಕ ಪ್ರಕಟಣೆ**

ಈ ಮೂಲಕ ತಿಳಿಯಪಡಿಸುವುದೇನೆಂದರೆ, ಈ ಮೇಲ್ಕಂಡ ಅರ್ಜಿದಾರರು, ಎದುರುದಾರರ ವಿರುದ್ಧ ಮಾನ್ಯ ಘನ ನ್ಯಾಯಾಲಯದಲ್ಲಿ 1 ರಿಂದ 4ನೇ ಅರ್ಜಿದಾರರ ತಂದೆ, 5ನೇ ಅರ್ಜಿದಾರರ ಮಾವ ಹಾಗೂ 6 ಮತ್ತು 7ನೇ ಅರ್ಜಿದಾರರ ಅಜ್ಜ ನಿಂಗಪ್ಪ ಬಿನ್ ಹನುಮಪ್ಪ, ಇವರು ದಿನಾಂಕ: 01.12.1974 ರಂದು ತಮ್ಮ ಊರಾದ ಆಯಿತೋಳು ಗ್ರಾಮ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆಯಲ್ಲಿ ಮರಣ ಹೊಂದಿದ್ದು ಕುಟುಂಬದ ಆಸ್ತಿಗಳ ಖಾತೆ ಮೂಲಕ ಹಕ್ಕು ಬದಲಾವಣೆ ಮತ್ತು ಇತರೆ ಸೌಲಭ್ಯಗಳನ್ನು ಪಡೆಯಲು ಈ ಅರ್ಜಿಯನ್ನು ನ್ಯಾಯಾಲಯದಲ್ಲಿ ಸಲ್ಲಿಸಿರುತ್ತಾರೆ. ಈ ವಿಷಯದ ಬಗ್ಗೆ ಈ ಅರ್ಜಿಯಲ್ಲಿ ತಿಳಿಸಿರುವ ಅರ್ಜಿದಾರರನ್ನು ಬಿಟ್ಟು ಬೇರೆ ವಾರಸುದಾರರು ತಕರಾರು ಸಲ್ಲಿಸುವವರಿದ್ದರೆ ನ್ಯಾಯಾಲಯದಲ್ಲಿ ಮುದ್ದತ್ತು ದಿನಾಂಕ: 05.10.2023 ರಂದು ಬೆಳಿಗ್ಗೆ 11:00 ಗೆ ಈ ಕೇಸಿನಲ್ಲಿ ಖುದ್ದಾಗಿ ಆಗಲೀ ಅಥವಾ ತಮ್ಮ ವಕೀಲರ ಮುಖಾಂತರವಾಗಲೀ ನ್ಯಾಯಾಲಯಕ್ಕೆ ಹಾಜರಾಗಿ ತಮ್ಮ ತಕರಾರನ್ನು ಸಲ್ಲಿಸತಕ್ಕದ್ದು, ತಪ್ಪಿದ್ದಲ್ಲಿ ಈ ಮೇಲ್ಕಂಡ ಅರ್ಜಿಯನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ಎಂದು ತಿಳಿಯಿರಿ.

ನ್ಯಾಯಾಲಯದ ಮುದ್ರೆ ಮತ್ತು ನನ್ನ ಸಹಿಯೊಂದಿಗೆ ದಿನಾಂಕ: 10.08.2023 ರಂದು ನೀಡಲಾಗಿದೆ.

ಸಹಿ/- ಶಿರಸ್ತೆದಾರರು, ಗೌರವಾನ್ವಿತ 1ನೇ ಕಿರಿಯ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ., ಚಿತ್ರದುರ್ಗ.

ಸಹಿ/- ಸಿ. ತಿಮ್ಮಣ್ಣ, ಅರ್ಜಿದಾರರ ಪರ ವಕೀಲರು, ಚಿತ್ರದುರ್ಗ.


Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T